ಸಂಪುಟ : 9 ಸಂಚಿಕೆ 76 ಪುಟ : 4 ಬೆಲೆ: 3.00 ಬುಧವಾರ ಎಪ್ರಿಲ್ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 76 Pages : 4 Price : 3.00 Wednesday April 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ವಿಜೃಂಭಣೆಯಿಂದ ಜರುಗಿದ ಜಗದ್ಗುರು ತೋಂಟದಾರ್ಯ ಮಠದ ಮಹಾರಥೋತ್ಸವ

# ಭಾವೈಕ್ಯತೆ ಸಾರಿದ ತೋಂಟದ ಜಾತ್ರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಾಡಿನ ಜಾತ್ರೆಗಳಲ್ಲಿಯೇ ಮಾದರಿಯ ಜಾತ್ರೆಯೆನಿಸಿದ ಐತಿಹಾಸಿಕ ಗದುಗಿನ ತೋಂಟ-ದಾರ್ಯ ಮಹಾರಥೋತ್ಸವವು ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಮಂಗಳವಾರ ಸಂಜೆ 6.30ಕ್ಕೆ ಅಸಂಖ್ಯಾತ ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಅಡ್ಡಪಲ್ಲಕ್ಕಿಯಲ್ಲಿ ಬಸವಣ್ಣನವರ ಹಾಗೂ ಸಿದ್ಧಲಿಂಗೇಶ್ವರರ ಭಾವಚಿತ್ರಗಳನ್ನು, ವಚನದ ಕಟ್ಟುಗಳನ್ನು ಇಟ್ಟು ಮೆರವಣಿಗೆ ಮಾಡಲಾಯಿತು. ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾವಿರಾರು ಭಕ್ತರೊಂದಿಗೆ ಎರಡು ಕಿ.ಮಿ ಉದ್ದದ ಮೆರವಣಿಗೆಯೊಂದಿಗೆ ನಡೆದು ಸಾಗಿದರು.



ಪೂಜ್ಯ ಶ್ರೀ ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು, ಸಾರಂಗಮಠ ಶ್ರೀಶೈಲ ಹಾಗೂ ಸುಲಫಲಮಠ, ಕಲಬುರ್ಗಿ, ಪೂಜ್ಯ ಶ್ರೀ ಮ.ನಿ.ಪ್ರ. ಗುರುಮಹಾಂತ ಮಹಾಸ್ವಾಮಿಗಳು ವಿಜಯಮಹಾಂತೇಶ್ವರ ಮಠ, ಚಿತ್ತರಗಿ-ಇಲಕಲ್ಲ, ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಶಿವಾನಂದ ಮಹಾಸ್ವಾಮಿಗಳು ವಿರಕ್ತಮಠ, ಸೊನ್ನ ಭೈರನಟ್ಟಿ, ದೊರೆಸ್ವಾಮಿ ವಿರಕ್ತಮಠದ ಶಾಂತಲಿಂಗ ಮಹಾಸ್ವಾಮಿಗಳು, ಕೆಂಚಬಸವ ಶಿವಾಚಾರ್ಯ ಸ್ವಾಮಿಗಳು ರೋಜಾ ಹಿರೇಮಠ, ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು, ಶಿವಾನಂದ ಶಿವಾಚಾರ್ಯ ಮಹಾಸ್ವಾಮಿಗಳು, ಹರ್ಲಾಪೂರದೇವರು ಮುಂತಾದ ಹರಗುರುಚರಮೂರ್ತಿಗಳು ಭಾಗವಹಿಸಿದ್ದರು. 10ಕ್ಕೂ ಹೆಚ್ಚು ಸಾಂಸ್ಕೃತಿಕ ಕಲಾತಂಡಗಳು ಮೆರವಣಿಗೆ ಯುದ್ದಕ್ಕೂ ಪಾಲ್ಗೊಂಡವು.

> ರಸ್ತೆಯುದ್ದಕ್ಕೂ ಹಿಂದೂ, ಮುಸ್ಲಿಂ ಸೇರಿದಂತೆ ಎಲ್ಲಾ ಸಮುದಾಯದವರು ಬಸವೇಶ್ವರ ಮತ್ತು ಸಿದ್ಧಲಿಂಗೇಶ್ವರ ವಚನ ಕಟ್ಟುಗಳಿಗೆ ಹಾಗೂ ಪೂಜ್ಯರಿಗೆ ಗೌರವ ಸಲ್ಲಿಸಿದರು. ಮೆರವಣಿಗೆಯಲ್ಲಿ ಪಾಲ್ಗೊಂಡ ಭಕ್ತರಿಗೆ ಮತ್ತು ಮೆರವಣಿಗೆ ತಂಡಗಳಿಗೆ ವರ್ತಕರು ಕುಡಿಯಲು ತಂಪು ಪಾನೀಯಗಳನ್ನು ವಿತರಿಸಿದ್ದು ಐಕ್ಯತೆಯ ಸಂದೇಶವನ್ನು ಸಾರಿತು.

ರಥೋತ್ಸವಕ್ಕೆ ಮುನ್ನ ಪರಂಪರೆಯಂತೆ ಶ್ರೀ ವೀರನಾರಾಯಣ ರಸ್ತೆಯಲ್ಲಿರುವ ಎಸ್.ಎಸ್. ಕಳಸಾಪೂರಶೆಟ್ರ ನಿವಾಸದಿಂದ ಮೆರವಣಿಗೆಯಲ್ಲಿ ಕಾಲ್ನಡಿಗೆಯ ಮೂಲಕ ಡಾ.ತೋಂಟದ ಸಿದ್ಧರಾಮ ಶ್ರೀಗಳು ಶ್ರೀಮಠಕ್ಕೆ ಆಗಮಿಸಿದರು.



ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಪ್ರೊ. ಕೆ.ಎಚ್ ಬೇಲೂರ, ಉಪಾಧ್ಯಕ್ಷ ಅಮರೇಶ ಚಾಗಿ, ಶ್ರೀದೇವಿ ಶೆಟ್ಟರ್, ಶಿವಯ್ಯ ನಾಲತ್ವಾಡಮಠ, ಕಾರ್ಯದರ್ಶಿ ಪ್ರವೀಣ ವಾರಕರ, ಸಹ ಕಾರ್ಯದರ್ಶಿ ಗವಿಸಿದ್ಧಪ್ಪ ಗಾಣಿಗೇರ, ಬರಕತಲಿ ಮುಲ್ಲಾ, ಚಂದ್ರಶೇಖರ ಇಟಗಿ, ಸಂಘಟನಾ ಕಾರ್ಯದರ್ಶಿ ತಿಮ್ಮರೆಡ್ಡಿ ಕೋನರಡ್ಡಿ, ಕೋಶಾಧ್ಯಕ್ಷ ವಿಶ್ವನಾಥ ಹಳ್ಳಿಕೇರಿ, ಸಹ ಕೋಶಾಧ್ಯಕ್ಷ ಅಜಯ ಮುನವಳ್ಳಿ, ಶ್ರೀಮಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟರ, ಎಸ್. ಎಸ್. ಪಟ್ಟಣಶೆಟ್ಟಿ, ವ್ಯವಸ್ಥಾಪಕರಾದ ಎಂ.ಎಸ್. ಅಂಗಡಿ, ಅಮರೇಶ ಅಂಗಡಿ, ರಾಜು ಕುರಡಗಿ, ಶೇಖಣ್ಣ ಕವಳಿಕಾಯಿ, ಸದು ಮದರಿಮಠ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

## ತೋಂಟದ ಸಿದ್ಧರಾಮ ಶ್ರೀಗಳಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ಭಾವೈಕ್ಯತೆಯ ಮಠವಾದ ಶ್ರೀ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವ ಪ್ರತಿ ವರ್ಷವೂ ಜಾತಿ-ಮತ-ಬೇಧವೆನ್ನದೆ ಎಲ್ಲಾ ಧರ್ಮದವರನ್ನು ಒಳಗೊಂಡಂತೆ ಪದಾಧಿಕಾರಿಗಳನ್ನು ನೇಮಕ ಮಾಡಿ ಜಾತ್ರೆ ನೆರವೇರಿಸುತ್ತಿರುವುದು ಭಾವೈಕ್ಯತೆಯ ಮಠ ಎಂಬ ಬಿರುದಿಗೆ ಪಾತ್ರವಾಗಿದೆ. ಅದರಂತೆ ಈ ವರ್ಷವೂ ಕೂಡ ಸಂಪ್ರದಾಯದಂತೆ ಎಸ್.ಎಸ್. ಕಳಸಾಪುರ ಅವರ ಮನೆಯಿಂದ ಜಾತ್ರಾ ಮೆರವಣಿಗೆ ಹೊರಟು ಪ್ರಮುಖ ಬೀದಿಗಳಲ್ಲಿ ಸಂಚರಿಸುವ ಸಂದರ್ಭದಲ್ಲಿ ಜುಮ್ಮಾ ಮಸ್ಜಿದ್ ಕಮಿಟಿಯ ವತಿಯಿಂದ ಶ್ರೀ ತೋಂಟದ ಸಿದ್ದರಾಮ ಮಹಾಸ್ವಾಮಿಗಳನ್ನು ಸನ್ಮಾನಿಸಲಾಯಿತು.

ಈ ಸಂರ್ಭದಲ್ಲಿ ಜಾಮಿಯಾ ಮಸ್ಜಿದ್ ಕಮಿಟಿಯ ಅಕ್ಬರ್‌ಸಾಬ ಬಬರ್ಚಿ, ಹಾಜಿ ಮಕಬೂಲ್‌ಸಾಬ್ ಶಿರಹಟ್ಟಿ, ಮಹಮ್ಮದ್‌ಶಫಿ ಕುದರಿ, ಹಾಜಿ ಧಾರವಾಡ, ರಿಯಾಜ್ ಬ್ಯಾಳಿರೊಟ್ಟಿ, ಇನ್ನೂ ಹಲವಾರು ಮುಸ್ಲಿಂ ಸಮಾಜದ ಗಣ್ಯರು ಉಪಸ್ಥಿರಿದ್ದರು.

## ಕಾಂಗ್ರೆಸ್ ರಾಜ್ಯ ಆಳುವ ನೈತಿಕತೆ ಕಳೆದುಕೊಂಡಿದೆ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯ ಸರ್ಕಾರ ರೈತರ ಕಿಸಾನ್ ಸಮ್ಮಾನ್, ರೈತ ವಿದ್ಯಾನಿಧಿ, ರೈತ ಶಕ್ತಿ ಯೋಜನೆ ಸ್ಥಗಿತಗೊಳಿಸಿದೆ. ಬರ ಪರಿಸ್ಥಿತಿಯಲ್ಲಿ ಯಾವುದೇ ಪರಿಹಾರ ನೀಡಿಲ್ಲ. ಕಾಂಗ್ರೆಸ್ ಸರ್ಕಾರ ರಾಜ್ಯ ಆಳುವ ನೈತಿಕತೆಯನ್ನು ಕಳೆದುಕೊಂಡಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಯಳವತ್ತಿ, ಮಾಗಡಿ, ಕಡಕೋಳ, ಬನ್ನಿಕೊಪ್ಪ, ಮಾಚೇನಹಳ್ಳಿ ಗ್ರಾಮಗಳಲ್ಲಿ ರೋಡ್‌ಶೋ ಮೂಲಕ ಮತಯಾಚನೆ ಮಾಡಿ ಅವರು ಮಾತನಾಡಿದರು.

ವಿಪಕ್ಷದವರು ಪ್ರಣಾಳಿಕೆ ಮಾಡಲಿ. ಆದರೆ, ಗ್ಯಾರಂಟಿ ಕಾರ್ಡ್ ಕೊಟ್ಟು ನಂಬಿಸಲು ಶುರುಮಾಡಿದ್ದಾರೆ. ಇದು ಕಾನೂನು ವಿರುದ್ಧ ಎಂದು ಗ್ಯಾರಂಟಿ ಕಾರ್ಡ್ ವಿರುದ್ಧ ಹರಿಹಾಯ್ದರು.

ಲೋಕಸಭೆಯಲ್ಲಿ 543 ಸ್ಥಾನಗಳಿದ್ದು, ಬಹುಮತಕ್ಕೆ 272 ಸ್ಥಾನಬೇಕು. ಕಾಂಗ್ರೆಸ್ ಸ್ಪರ್ಧೆ ಮಾಡಿರುವುದೇ 230 ಸ್ಥಾನಗಳಿಗೆ. ಹೀಗಾಗಿ ಕಾಂಗ್ರೆಸ್ ಬಹುಮತ ಬರುವುದಿಲ್ಲ ಎಂದು ವಾಗ್ದಾಳಿ ನಡೆಸಿದರು.

ಪ್ರಧಾನಿ ನರೇಂದ್ರ ಮೋದಿಯವರು ಕೊವಿಡ್ ಸಂದರ್ಭದಲ್ಲಿ ದೇಶದ 130 ಕೋಟಿ ಜನರಿಗೆ ಉಚಿತ ಲಸಿಕೆ ಕೊಟ್ಟು ಪ್ರಾಣ ಉಳಿಸಿದ್ದಾರೆ. ಅಮೇರಿಕಾ ದೇಶದಲ್ಲಿ ಒಂದು ಲಸಿಗೆ 30 ಸಾವಿರ ರೂಪಾಯಿ ಇದೆ. ಮೋದಿಯವರು ಎಲ್ಲರಿಗೂ ಉಚಿತವಾಗಿ ಮೂರು ಬಾರಿ ಲಸಿಕೆ ಕೊಟ್ಟಿದ್ದಾರೆ. ಪ್ರಾಣ ಉಳಿಸಿದ ಅವರ ಋಣವನ್ನು ಬಿಜೆಪಿಗೆ ಮತ ಹಾಕುವ ಮೂಲಕ ತೀರಿಸಬೇಕು. ನಾನು ಈ ಕ್ಷೇತ್ರದ ಸಂಸದನಾಗಿ ಆಯ್ಕೆಯಾಗಿ ಈ ಭಾಗಕ್ಕೆ ಅನುಕೂಲವಾಗುವ ನೀರಾವರಿ ಯೋಜನೆ, ಕೈಗಾರಿಕೆಗಳನ್ನು ತರುವ ಪ್ರಯತ್ನ ಮಾಡುತ್ತೇನೆ. ಕ್ಷೇತ್ರದ ಜನರ ಧ್ವನಿಯಾಗಿ ಸಂಸತ್ತಿನಲ್ಲಿ ನಿಲ್ಲುತ್ತೇನೆ ಎಂದರು.

ಪ್ರಚಾರದ ಸಂದರ್ಭದಲ್ಲಿ ಶಿರಹಟ್ಟಿ ಶಾಸಕ ಚಂದ್ರು ಲಮಾಣಿ ಸೇರಿದಂತೆ ಸ್ಥಳೀಯ ಮುಖಂಡರು ಹಾಜರಿದ್ದರು.

### ರೋಣ ತಾ.ಪಂ ಟಿಸಿ ಪ್ರವೀಣ ಸೂಡಿ ಮದುವೆಯಲ್ಲಿ ಮತದಾನ ಜಾಗೃತಿ

# ಮತದಾನ ಪ್ರತಿ ಅರ್ಹ ವ್ಯಕ್ತಿಯ ಕರ್ತವ್ಯ

**■ವಿಜಯಸಾಕ್ಷಿ ಸುದ್ದಿ, ರೋಣ**

ಲೋಕಸಭಾ ಚುನಾವಣೆ ನಿಮಿತ್ತ ಮತದಾನದ ಮಹತ್ವ ಸಾರುವ ಉದ್ದೇಶದಿಂದ ರೋಣ ತಾಲೂಕ ಪಂಚಾಯತ ತಾಂತ್ರಿಕ ಸಂಯೋಜಕ ಪ್ರವೀಣ ಸೂಡಿ ಅವರ ಮದುವೆ ಸಮಾರಂಭದಲ್ಲಿ ರೋಣ ತಾ.ಪಂ ಕಾರ್ಯನಿರ್ವಾಹಕ ಎಸ್.ಕೆ. ಇನಾಮದಾರ ಅಧ್ಯಕ್ಷತೆಯಲ್ಲಿ ವಿಶಿಷ್ಟ ರೀತಿಯಲ್ಲಿ ಮತದಾನ ಜಾಗೃತಿ ಮಾಡಲಾಯಿತು.

ಗದಗ ನಗರದ ಶಿವಾನಂದ ಕಲ್ಯಾಣ ಮಂಟಪದಲ್ಲಿ ಗಜೇಂದ್ರಗಡ ತಾಲೂಕಿನ ನಿಡಗುಂದಿ ಗ್ರಾಮದ ವೀರಪ್ಪ ಹಾಗೂ ಶಿವಪ್ಪ ಸೂಡಿ ಅವರ ಮಕ್ಕಳಾದ ಪ್ರಕಾಶ ಹಾಗೂ ಪ್ರವೀಣ ಅವರ ಮದುವೆಯಲ್ಲಿ ಕಡ್ಡಾಯ ಮತದಾನದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ವಧು-ವರರು ತಮ್ಮ ವಿವಾಹಕ್ಕೆ ಬಂದ ಅತಿಥಿಗಳಿಗೆ ಮತದಾನ ಮಾಡುವಂತೆ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು.




ಈ ಸಂದರ್ಭದಲ್ಲಿ ಮಾತನಾಡಿದ ರೋಣ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಕೆ. ಇನಾಮದಾರ, ಮತದಾನ ಪ್ರತಿ ಅರ್ಹ ವ್ಯಕ್ತಿಯ ಕರ್ತವ್ಯವಾಗಿದೆ. ಎಲ್ಲರೂ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವ ಮೂಲಕ ಸಂವಿಧಾನದ ಆಶಯವನ್ನು ಎತ್ತಿ ಹಿಡಿಯಬೇಕು. ಮತದಾನದ ಅಧಿಕಾರವನ್ನು ಸರಿಯಾಗಿ ಬಳಸಿಕೊಂಡು ಯೋಗ್ಯ ವ್ಯಕ್ತಿಯನ್ನು ಚುನಾಯಿಸಬೇಕು ಎಂದರು.

> ನಾನು ನಮ್ಮ ತಾಲೂಕಿನ ಸ್ವೀಪ್ ಸಮಿತಿ ಅಧ್ಯಕ್ಷನಾಗಿದ್ದು, ತಾಲೂಕಿನಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಮಾಡುತ್ತೇವೆ. ನಮ್ಮ ಟಿಸಿ ಪ್ರವೀಣರ ಆಶಯದಂತೆ ಅವರ ಮದುವೆಯಲ್ಲಿ ಮೂರು ಸಾವಿರ ಜನರ ನಡುವೆ ಮತದಾನ ಜಾಗೃತಿ ಮಾಡಿದ್ದು ಎಲ್ಲಿಲ್ಲದ ಖುಷಿ ತಂದಿದೆ.
>
> **- ಎಸ್.ಕೆ. ಇನಾಮದಾರ.**
>
> ರೋಣ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ.

ಅರ್ಹ ಮತದಾರರು ಯಾವುದೇ ಆಮಿಷಗಳಿಗೆ ಬಲಿಯಾಗದೇ ಉತ್ತಮ ಅಭ್ಯರ್ಥಿಗೆ ಮತ ಚಲಾಯಿಸಬೇಕು. ಮತದಾನದ ದಿನ ರಜೆ ಮೇಲೆ ಊರಿಗೆ ತೆರಳದೆ ಮತದಾನ ಮಾಡಬೇಕು ಎಂದು ಮದುವೆಗೆ ಬಂದ ಅಥಿತಿಗಳಿಗೆ ಸಂದೇಶ ನೀಡಿದರು.

## ಅಗಡಿ ಕಾಲೇಜಿನಲ್ಲಿ 'ವಿಶ್ವ ಪುಸ್ತಕ ದಿನಾಚರಣೆ'

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ತಾಂತ್ರಿಕ ಮತ್ತು ಅಭಿಯಾಂತ್ರಿಕ ಮಹಾವಿದ್ಯಾಲ ಯದಲ್ಲಿ ಮಂಗಳವಾರ ಪ್ರೊ. ವೆಂಕಟ ಸುಬ್ಬ ಶೆಟ್ಟಿ ಗ್ರಂಥಾಲಯದ ಸಂಯುಕ್ತ ಆಶ್ರಯದಲ್ಲಿ 'ವಿಶ್ವ ಪುಸ್ತಕ ದಿನಾಚರಣೆ'ಯನ್ನು ಆಚರಿಸಲಾಯಿತು.



ಹುಬ್ಬಳ್ಳಿಯ ವರದಶ್ರೀ ಫೌಂಡೇಶನ್‌ನ ಮಲ್ಲಿಕಾರ್ಜುನ ರಡ್ಡೇರ ಮಾತನಾಡಿ, ಪುಸ್ತಕ ದಿನಾಚರಣೆಯು ಎಲ್ಲ ದಿನಾಚರಣೆಗಳ ತಾಯಿಯಿದ್ದಂತೆ. ಪುಸ್ತಕವೆಂಬುದು ಜೀವನದ ಒಂದು ಬಹುದೊಡ್ಡ ಸಂಪತ್ತು ಮತ್ತು ಜೀವನದ ಭಾಗ. ಪುಸ್ತಕವೂ ಹೇಳುತ್ತದೆ, ನೀನು ತಲೆ ತಗ್ಗಿಸಿ ನನ್ನನ್ನು ಓದು. ನಿನ್ನನ್ನು ಜಗತ್ತೇ ತಲೆಯೆತ್ತಿ ನೋಡುವಂತೆ ಮಾಡುತ್ತೇನೆ ಎಂದು. ಅಂತರ್ಜಾಲ ಎಂಬುದು ನಮಗೆ ಪ್ರಚಾರವನ್ನು ಕೊಡುತ್ತದೆ. ಪುಸ್ತಕವು ವಿಚಾರವನ್ನು ಕೊಡುತ್ತದೆ ಎಂಬೆಲ್ಲ ವಿಶ್ಲೇಷಣಾತ್ಮಕ ವಿಚಾರಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸಹಾಯಕ ಗ್ರಂಥಪಾಲಕ ಮಲ್ಲಯ್ಯ ಹಿರೇಮಠ ಪ್ರಾಸ್ತಾವಿಕ ನುಡಿಗಳೊಂದಿಗೆ ವಿಶ್ವ ಪುಸ್ತಕ ದಿನದ ಇತಿಹಾಸ ಮತ್ತು ಅದರ ಆಚರಣೆ ನಡೆದು ಬಂದ ಹಾದಿಯನ್ನು ವಿವರಿಸಿ, ಕಾರ್ಯಕ್ರಮದ ಉಪನ್ಯಾಸಕರ ಪರಿಚಯವನ್ನು ಮಾಡಿಕೊಟ್ಟರು.

ಅಧ್ಯಕ್ಷತೆ ವಹಿಸಿದ್ದ ಪಿಯುಸಿ ವಿಭಾಗದ ಪ್ರಾಂಶುಪಾಲ ಡಾ. ಎನ್. ಹಯವದನ ಮಾತನಾಡಿ, ಓದಿನ ಮಹತ್ವದ ಕಥೆಗಳನ್ನು ಹೇಳುವ ಮೂಲಕ ವಿದ್ಯಾರ್ಥಿಗಳಿಗೆ ಪುಸ್ತಕದ ಮಹತ್ವದ ಬಗ್ಗೆ ಪ್ರೇರೇಪಿಸಿದರು.

ಕಾರ್ಯಕ್ರಮದಲ್ಲಿ ಎಲ್ಲ ವಿಭಾಗದ ಮುಖ್ಯಸ್ಥರು, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗ, ಗ್ರಂಥಾಲಯದ ಸಿಬ್ಬಂದಿ ವರ್ಗದವರು, ಕಾಲೇಜಿನ ಎಲ್ಲ ವಿಭಾಗದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಜಗದೀಶ್ ಶಿಗ್ಲಿಮಠ, ವೀರಯ್ಯ ಬಾಳೂರಮಠ, ವಿದ್ಯಾರ್ಥಿನಿ ಅಕ್ಷತಾ ಹಡಪದ, ಪ್ರಿಯಾಂಕ ಹಾವೇರಿ ನಿರ್ವಹಿಸಿದರು.

## ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರೆಯ ಲಘು ರಥೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜ. ತೋಂಟದಾರ್ಯ ಮಠದ 2024ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಏ.24ರಂದು ಲಘು ರಥೋತ್ಸವ ಜರುಗಲಿದೆ.

ಸಂಜೆ 4 ಗಂಟೆಗೆ ಬಸವೇಶ್ವರ ನಗರದ ಶ್ರೀ ಕುಬಸದ ಬಂಧುಗಳ ಮನೆಯಿಂದ ಮೆರವಣಿಗೆ ಮೂಲಕ ಪೂಜ್ಯ ಡಾ. ಸಿದ್ಧರಾಮ ಮಹಾಸ್ವಾಮಿಗಳು ಶ್ರೀಮಠಕ್ಕೆ ಆಗಮಿಸುವರು. ಸಂಜೆ 6.30ಕ್ಕೆ ಲಘು ರಥೋತ್ಸವ ಜರುಗಲಿದ್ದು, ಸಂಜೆ 7.30ಕ್ಕೆ ವೇದಿಕೆ ಕಾರ್ಯಕ್ರಮ ನೆರವೇರಲಿದೆ. ದಿವ್ಯ ಸಾನ್ನಿಧ್ಯವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಜಡೆ ಸಂಸ್ಥಾನಮಠದ ಡಾ. ಮಹಾಂತ ಮಹಾಸ್ವಾಮಿಗಳನ್ನು ಹಾಗೂ ಕುಮಾರ ಕೆಂಪಿನ ಸಿದ್ಧವೃಷಭೇಂದ್ರ ಮಹಾಸ್ವಾಮಿಗಳನ್ನು ಸಂಮಾನಿಸಲಾಗುವುದು.

ಪ್ರೊ. ಶಾಲಿನಿ ದೊಡಮನಿ ಸಂಪಾದಿಸಿದ 'ಕರ್ನಾಟಕದ ಗಾಂಧಿ ಹರ್ಡೇಕರ ಮಂಜಪ್ಪನವರು' (ಹಿಂದಿ ಆವೃತ್ತಿ) ಗ್ರಂಥ ಲೋಕಾರ್ಪಣೆಗೊಳ್ಳುವುದು. ಸಂಡೂರು ವಿರಕ್ತಮಠದ ಪ್ರಭು ಮಹಾಸ್ವಾಮಿಗಳು, ಅರಸಿಕೆರೆ ಕೋಲಶಾಂತೇಶ್ವರ ಮಠದ ಶಾಂತಲಿಂಗ ದೇಶೀಕೇಂದ್ರ ಮಹಾಸ್ವಾಮಿಗಳು, ಆಲಮೇಲ ವಿರಕ್ತಮಠದ ಜಗದೇವ ಮಲ್ಲಿಬೊಮ್ಮಯ್ಯ ಶ್ರೀಗಳು, ಕಲಬುರ್ಗಿಯ ರೋಜಾ ಹಿರೇಮಠದ ಕೆಂಚಬಸವ ಶಿವಾಚಾರ್ಯ ಸ್ವಾಮಿಗಳು, ರಟಕಲ್ ಹಿರೇಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸುವರು.

ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಪ್ರಕಾಶ ಹಡಪದ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಸಂಗೀತ ಕಲಾವಿದರಾದ ಅಶೋಕ ಹುಗ್ಗಣ್ಣವರ ಅವರಿಂದ ವಚನ ಸಂಗೀತ ಜರುಗುವುದು ಎಂದು ಜಾತ್ರಾ ಸಮಿತಿಯ ಪ್ರಕಟಣೆ ತಿಳಿಸಿದೆ.

## ಸಂಪಾದಕೀಯ

# ಮಾತಿನ ವ್ಯತ್ಯಾಸ ಮನೆ ಕೆಡಿಸಿತು

ಮುಖ್ಯಮಂತ್ರಿ ಸಿದ್ದರಾಮಯ್ಯ ಮುಸ್ಲಿಂ ಸಮಾವೇಶದಲ್ಲಿ ಮಾಡಿದ ಭಾಷಣ ವಿವಾದಕ್ಕೆ ಮಾತ್ರವಲ್ಲ, ಪ್ರತಿಪಕ್ಷಗಳ ಟೀಕೆಗೆ ಆಹಾರವಾಗಿದೆ. ದೇಶದ ಸಂಪತ್ತನ್ನು ಮುಸ್ಲಿಂರಿಗೂ ಹಂಚಿಕೆ ಮಾಡುತ್ತೇನೆ. ಯಾವುದೇ ಕಾರಣಕ್ಕೂ ಮುಸ್ಲಿಂ ಸಮಾಜಕ್ಕೆ ಅನ್ಯಾಯ ಆಗಲು ಬಿಡುವುದಿಲ್ಲ ಎಂದಿರುವುದು ಈಗ ವಿವಾದದ ಕೇಂದ್ರ ಬಿಂದುವಾಗಿದೆ.

ಸಿದ್ದರಾಮಯ್ಯ ಆಡಿರುವ ಮಾತನ್ನು ಗಮನಿಸಿದಲ್ಲಿ ಅವರು ಹೇಳಿರುವುದಕ್ಕೂ ಬಿಜೆಪಿ ಕಿಡಿಗೇಡಿಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಟೀಕೆಗಳಿಗೆ ದೊಡ್ಡ ವ್ಯತ್ಯಾಸವೇನಿಲ್ಲ. ಆದರೂ ಕಿಡಿಗೇಡಿಗಳು ಮಾತಿನ ಧಾಟಿಯನ್ನು ಬದಲಿಸಿ ವಿವಾದ ಸೃಷ್ಟಿಸಿದ್ದಾರೆ.


ಸಿದ್ದರಾಮಯ್ಯ ಹೇಳಿರುವುದಿಷ್ಟೆ, ಮುಸ್ಲಿಂ ಸಮಾಜಕ್ಕೂ ದೇಶದ ಸಂಪತ್ತನ್ನು ಹಂಚಿಕೆ ಮಾಡುವೆ ಎಂದಿದ್ದಾರೆ. ಎಲ್ಲಿಯೂ ಮುಸ್ಲಿಂ ಸಮಾಜಕ್ಕೆ ಹಂಚಿಕೆ ಮಾಡುತ್ತೆನೆ ಎಂದಿಲ್ಲ. ಸಮಾಜಕ್ಕೂ ಮತ್ತು ಸಮಾಜಕ್ಕೆ ಎನ್ನುವ ಶಬ್ಧ ಮತ್ತು ಅರ್ಥದಲ್ಲಿ ಸಾಕಷ್ಟು ವ್ಯತ್ಯಾಸವಿದೆ.

ಆ ವ್ಯತ್ಯಾಸವನ್ನು ಗಮನಿಸಿಯೂ ಅದನ್ನು ತಿರುಚಿ ರಾಜಕೀಯ ಲಾಭ ಪಡೆಯಲು ಯತ್ನಿಸುತ್ತಿದ್ದಾರೆ. ಸದ್ಯ ಕರ್ನಾಟಕದಲ್ಲಿ ಜಾತಿ ರಾಜಕಾರಣಿಗೆ ಅತ್ಯಂತ ಪ್ರಮುಖ ಅಸ್ತ್ರವನ್ನಾಗಿ ಬಿಜೆಪಿ ಬಳಸಿಕೊಳ್ಳುತ್ತಿದೆ. ನೇಹಾ ಹಿರೇಮಠ ಕೊಲೆ ಪ್ರಕರಣದಿಂದ ಆದ ರಾಜಕೀಯ ಲಾಭ ಗಮನಿಸಿದ ಬಿಜೆಪಿ ನಾಯಕರು, ಅಂಥ ಯಾವುದೇ ಅವಕಾಶವನ್ನು ಕೈಚೆಲ್ಲಬಾರದು ಎಂದು ನಿರ್ಣಯಿಸಿದಂತಿದೆ.

ಅದರ ಮುಂದುವರಿದ ಭಾಗವಾಗಿಯೇ ಸಿದ್ದರಾಮಯ್ಯ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ. ಲಿಂಗಾಯತ, ಒಕ್ಕಲಿಗರು, ಕುರುಬ ಎನ್ನುವ ಜಾತಿ ರಾಜಕಾರಣವನ್ನು ಮೀರಿ, ಹಿಂದು– ಮುಸ್ಲಿಂ ಧರ್ಮ ರಾಜಕಾರಣವನ್ನ ಎಳೆ ತಂದು, ಮತ ಪಡೆಯುವುದು ಬಿಜೆಪಿ ಹುನ್ನಾರ. ಅದು ಈ ಬಾರಿಯೂ ಮುಂದುವರಿಯಲಿದೆ. ಲಾಭವನ್ನೂ ಮಾಡಿಕೊಳ್ಳಲಿದೆ. ಈ ಮನಸ್ಥಿತಿ ಬದಲಾಗದ ಹೊರತು ಶುದ್ಧ ರಾಜಕಾರಣ ಕಲ್ಪಿಸಿಕೊಳ್ಳಲು ಸಾಧ್ಯವಿಲ್ಲ.

## ಚುನಾವಣೆಯ ಸಂದರ್ಭದಲ್ಲಿ ಗರಿಗೆದರಿದ 'ಫ್ರೀ ಆಫರ್' ಸ್ಕ್ಯಾಮ್‌ಗಳು

# ನೆನಪಿಡಿ, ಇಲ್ಲಿ ಯಾವುದೂ ಉಚಿತವಿಲ್ಲ!



ನಾವು ಈ ತಂತ್ರಜ್ಞಾನ ಯುಗದಲ್ಲಿ ಎಷ್ಟೆಲ್ಲ ಮುಂದುವರೆದಿದ್ದೇವೆ, ಎಂತೆಂಥಾ ಸಾಧನೆ ಮಾಡಿದ್ದೇವೆ, ಅಸಾಧ್ಯವಾದುದನ್ನೂ ಸಾಧಿಸಿ ಬೀಗುತ್ತಿದ್ದೇವೆ ಎಂಬುದು ಎಷ್ಟು ಸತ್ಯವೋ, ಇನ್ನೊಂದು ಮಗ್ಗುಲಲ್ಲಿ, ಅದೇ ತಂತ್ರಜ್ಞಾನದ ಅಪಾಯಗಳು, ಮೋಸದಾಟಗಳ ಬಗ್ಗೆ ಎಚ್ಚರಿಕೆ ಮೂಡಿಸುವಲ್ಲಿ ಹಿಂದೆ ಬಿದ್ದಿದ್ದೇವೆ ಎಂಬುದೂ ಅಷ್ಟೇ ಸತ್ಯ. ಅಸಲಿಗೆ ಇವೆರಡೂ ಒಂದೇ ನಾಣ್ಯದ ಎರಡು ಮುಖಗಳು. ಒಂದು ಮುಖ ಅಭಿವೃದ್ಧಿಯದಾದರೆ, ಎಚ್ಚರಿಕೆಯೆಂಬುದು ಇನ್ನೊಂದು ಮುಖವೆಂದುಕೊಳ್ಳಬಹುದು. ಒಂದನ್ನೊಂದು ಎಂದಿಗೂ ಮುಖಾಮುಖಿಯಾಗುವುದಿಲ್ಲ!

ಇಂತಹ ಮೋಸದಾಟಗಳ ಬಗ್ಗೆ ವಿಷಯ ತಜ್ಞರು, ಸೈಬರ್ ಕ್ರೈಂ ಇಲಾಖೆಯ ಸಿಬ್ಬಂದಿಗಳು, ಪೊಲೀಸ್ ಇಲಾಖೆ ಎಷ್ಟೇ ಮಾಹಿತಿ ನೀಡುತ್ತಿದ್ದರೂ ಎಚ್ಚರವಾಗುತ್ತಿಲ್ಲ. ಈ ಹಿಂದಿನ ಅದೆಷ್ಟೋ ಫ್ರೀ ಆಫರ್ ಸ್ಕ್ಯಾಮ್‌ಗಳ ಸಾಲಿಗೆ ಇನ್ನೊಂದು ಸೇರ್ಪಡೆ 'ಫ್ರೀ ರಿಚಾರ್ಜ್ ಆಫರ್!' ಭಾರತದಲ್ಲಿ ಲೋಕಸಭಾ ಚುನಾವಣೆ ಘೋಷಣೆಯಾಗುತ್ತಲೇ ಹೀಗೊಂದು ಮೆಸೇಜ್ ವಾಟ್ಸಪ್‌ನಲ್ಲಿ ಹರಿದಾಡತೊಡಗಿತು. 'ಬಿಜೆಪಿಯ ಉಚಿತ ರೀಚಾರ್ಜ್ ಯೋಜನೆ. ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲಾ ಭಾರತೀಯ ಬಳಕೆದಾರರಿಗೆ 3 ತಿಂಗಳ ಉಚಿತ ರೀಚಾರ್ಜ್ ನೀಡುತ್ತಿದ್ದಾರೆ. ಕೆಳಗೆ ನೀಡಿರುವ ಲಿಂಕ್ ಅನ್ನು ಕ್ಲಿಕ್ ಮಾಡಿ ಮತ್ತು 3 ತಿಂಗಳ ಉಚಿತ ರೀಚಾರ್ಜ್ ಪಡೆಯಿರಿ' ಎಂಬುದೇ ಆ ಮೆಸೇಜ್.

ಮೊದಲೇ ಹೇಳಿದಂತೆ, ಇದೂ ಒಂದು ಮೋಸದ ಜಾಲವಾಗಿರಬಹುದು ಎಂಬ ಅನುಮಾನ ಎಷ್ಟೋ ಜನರಿಗೆ ಬರಲಿಲ್ಲ. ಲಿಂಕ್ ಒತ್ತಿದ್ದೇ ತಡ. ವಾಟ್ಸಪ್ ಸಂಪರ್ಕದಲ್ಲಿರುವ ಎಷ್ಟೂ ನಂಬರ್‌ಗಳಿಗೆ ನಮಗೇ ಅರಿವಿಲ್ಲದಂತೆ ಇದೇ ಮೆಸೇಜ್ ಫಾರ್ವರ್ಡ್ ಆಯಿತು. ಎಷ್ಟೋ ಫೋನ್‌ಗಳು ಹ್ಯಾಕ್ ಆದವು.

ಉಚಿತವೆಂದರೆ ನನಗೊಂದು, ಮನೆಯವರಿಗೂ ಒಂದೊಂದು ಎನ್ನುವ ಕಾಲದಲ್ಲೇ ನಾವಿನ್ನೂ ನಿಂತಿದ್ದೇವೆ.

ಇದರ ಬೆನ್ನಲ್ಲೇ ಚುನಾವಣೆಗೆ ಸಂಬಂಧಿಸಿ ಇಂತದೇ ಇನ್ನೂ ಹಲವು ಸೈಬರ್ ಫಿಶಿಂಗ್ ನಡೆಯುತ್ತಿದೆ. 'ನಿಮ್ಮ ವೋಟರ್ ಐಡಿ ವಿವರಗಳನ್ನು ಪರಿಶೀಲಿಸದಿದ್ದರೆ ನಿಮ್ಮ ವೋಟರ್ ಐಡಿ ನಿಷ್ಕ್ರಿಯಗೊಳ್ಳುತ್ತದೆ. ಇದನ್ನು ತಪ್ಪಿಸಲು ಕೆಳಗಿನ ಲಿಂಕ್ ಕ್ಲಿಕ್ ಮಾಡಿ' ಎಂಬ ಸಂದೇಶಗಳೂ ಓಡಾಡುತ್ತವೆ. ಕ್ಲಿಕ್ ಮಾಡಿದಾಗ ನಮಗರಿವಿಲ್ಲದಂತೆ ನಮ್ಮಲ್ಲಿರುವ ಎಲ್ಲಾ ಸಂಪರ್ಕಗಳಿಗೂ ಫಾರ್ವರ್ಡ್ ಆಗುತ್ತವೆ. ಅವರಿಂದ ಫೋನ್ ಸಂಖ್ಯೆ, ಆಧಾರ್, ವೋಟರ್ ಐಡಿ ಮತ್ತು ಇತರ ಅವರ ವೈಯಕ್ತಿಕ ಮಾಹಿತಿಗಳು ಸುಲಭವಾಗಿ ಸೈಬರ್ ಕಳ್ಳರ ಪಾಲಾಗುತ್ತವೆ.

ಚುನಾವಣೆಯ ಸಮಯದಲ್ಲಿ ಇಂತಹ ಸೈಬರ್ ದಾಳಿಗಳು ಸೃಷ್ಟಿಸುವ ಸಮಸ್ಯೆ ಒಂದೆರಡಲ್ಲ. ರಾಜಕೀಯ ನಾಯಕರ ಡೀಪ್ ಫೇಕ್ ವೀಡಿಯೊಗಳು ಅಥವಾ ನಕಲಿ ಸಮೀಕ್ಷೆಯ ಫಲಿತಾಂಶಗಳನ್ನು ಮತದಾನದ ನಿರ್ಧಾರಗಳ ಮೇಲೆ ಪ್ರಭಾವ ಬೀರಲು ಅಥವಾ ಕೋಮುಗಲಭೆಯನ್ನು ಪ್ರಚೋದಿಸಲು ವೈರಲ್ ಆಗುತ್ತವೆ. ಅರಿವಿಲ್ಲದ ಅಭಿಮಾನಿಗಳು, ಅನುಯಾಯಿಗಳನ್ನು ಲೂಟಿ ಮಾಡುವ ಅಥವಾ ವಂಚಿಸುವ ಉದ್ದೇಶದಿಂದ ಅವರಿಗೆ ರಾಜಕೀಯ ಪಕ್ಷಗಳು ಅಥವಾ ಅಭ್ಯರ್ಥಿಗಳ ಪರವಾಗಿ ಲಿಂಕ್‌ಗಳು ಅಥವಾ ಕಿಖ ಕೋಡ್‌ಗಳೊಂದಿಗೆ ನಕಲಿ ನಿಧಿ ಸಂಗ್ರಹಿಸುವ ಮೆಸೇಜ್, ಇಮೇಲ್‌ಗಳೂ ಹರಿದಾಡುತ್ತವೆ.

ಆದರೆ, ಪ್ರಜ್ಞಾವಂತರಾದ ಮತದಾರರು, ಸಾರ್ವಜನಿಕರು ಇಂತಹ ಘಟನೆಗಳು ಕಂಡುಬಂದಲ್ಲಿ ತಕ್ಷಣ ಚುನಾವಣಾ ಆಯೋಗ ರಚಿಸಿರುವ ಸಿ–ವಿಜಿಲ್ ಅಪ್ಲಿಕೇಶನ್‌ನಲ್ಲಿ ವರದಿ ಮಾಡುವ ಅವಕಾಶವಿರುತ್ತದೆ. ಇಂತಹ ಚುನಾವಣೆ ಸಂಬಂಧಿತ ವಂಚನೆಗಳಿಂದ ನಿಮ್ಮನ್ನು ರಕ್ಷಿಸಿಕೊಳ್ಳಲು ಸಾಕಷ್ಟು ಮಾರ್ಗಗಳೂ ಇವೆ.

ಇಷ್ಟರ ಮೇಲೂ ನೀವು ಮೂಸ ಹೋಗಿದ್ದೀರೆಂಬ ಅನುಮಾನ ಬಂದರೆ, ತಕ್ಷಣ 1930 ಸೈಬರ್ ಕ್ರೈಂ ಸಹಾಯವಾಣಿಗೆ ಕರೆ ಮಾಡಿ, ಛಿಥಿ–ಛಜಡಿಛಿಡಿಟಜ.ರಠಿ.ಟಿ ವೆಬ್‌ಸೈಟ್ ಅಥವಾ ಹತ್ತಿರದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ. ವಂಚನೆಯ ಬಗ್ಗೆ ಚುನಾವಣಾ ಆಯೋಗ ಮತ್ತು ಆಯಾ ಸಾಮಾಜಿಕ ಮಾಧ್ಯಮ ವೆಬ್‌ಸೈಟ್, ಆ್ಯಪ್‌ನಲ್ಲಿ ವರದಿ ಮಾಡಿ ಮತ್ತು ದೂರು ನೀಡಿ. ನಿಮಗೆ ಅರಿವಿಲ್ಲದೆ ಅಪರಿಚಿತರಿಗೆ ಹಣ ವರ್ಗಾಯಿಸಿದ್ದರೆ, ಪೊಲೀಸರ ಸಹಾಯದಿಂದ ನೀವು ವರ್ಗಾಯಿಸಿದ ಮೊತ್ತದ ಮೇಲೆ ಡೆಬಿಟ್ ಫ್ರೀಜ್ ಮಾಡಿಸಬಹುದು ಎಂಬುದೂ ಗಮನಕ್ಕಿರಲಿ.

## ಚಾರ್ಟರ್ಡ್ ಅಕೌಂಟೆನ್ಸಿ ಕೋರ್ಸ್ ಜಾಗೃತಿ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ಮತ್ತು ಹುಬ್ಬಳ್ಳಿಯ ICAI ಸಹಯೋಗದಲ್ಲಿ SIRC ಅಡಿಯಲ್ಲಿ Chartered Accountancy Course ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಹುಬ್ಬಳ್ಳಿ ಬ್ರಾಂಚಿನ SIRC ಮಾಜಿ ಚೇರಮನ್ ಸಿಎ ಕೆ.ಎಸ್. ಚಟ್ಟಿ, ಮಹೇಶ್ವರಿ ಪಾಟೀಲ ಮಹೇಂದ್ರಕರ ಹಾಗು ಅಧ್ಯಕ್ಷತೆ ವಹಿಸಿದ್ದ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಕೆ.ಎಸ್ ಚೆಟ್ಟಿ ಮಾತನಾಡಿ, ಮಾನವ ಜೀವನದಲ್ಲಿ ಎಲ್ಲಕ್ಕಿಂತ ಜ್ಞಾನವೇ ಬಹುದೊಡ್ಡ ಶಕ್ತಿ. ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಎಸ್.ಎಸ್. ಪಟ್ಟಣಶೆಟ್ಟಿ ಮಾತನಾಡಿ, ಏಕಾಗ್ರತೆಯಿಂದ ಸತತ ಅಧ್ಯಯನಶೀಲರಾಗಿ, ಸಾಮಾಜಿಕ ಜಾಲತಾಣಗಳನ್ನು ಸದುಪಯೋಗಪಡಿಸಿಕೊಂಡಲ್ಲಿ ಸಿ.ಎ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ಸಾಧ್ಯ ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ SIRC ಹುಬ್ಬಳ್ಳಿ ಬ್ರಾಂಚಿನ ವೈಸ್ ಚೇರಮನ್ ಸಿಎ ಅಕ್ಷಯಕುಮಾರ ಸಿಂಘಿ ಹಾಗೂ ಚೇರಮನ್ ಸಿಎ ಮಲ್ಲಿಕಾರ್ಜುನ ಪಿಸೆ ಅವರನ್ನು ಸನ್ಮಾನಿಸಲಾಯಿತು. ಕಾಗಿನೆಲೆ ವೇದಿಕೆಯ ಮೇಲೆ ಅವರು ಉಪಸ್ಥಿತರಿದ್ದರು.

ಮಂಜುಶ್ರೀ ಹಿರೇಮಠ ಪ್ರಾರ್ಥಿಸಿದರು. ಪ್ರಾ. ಎಂ.ಎಂ. ಬುರಡಿ ಪ್ರಾಸ್ತಾವಿಕ ನುಡಿಗಳನ್ನಾಡಿ ಸ್ವಾಗತಿಸಿದರು. ಪ್ರೊ. ಶಿವಕುಮಾರ ಅಣ್ಣಿಗೇರಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ ಎಸ್.ಐ. ಪಟ್ಟಣಶೆಟ್ಟಿ ವಂದಿಸಿದರು.

## ಕಾಂಗ್ರೆಸ್ ಸರ್ಕಾರ ರಾಜ್ಯ ಆಳುವ ನೈತಿಕತೆಯನ್ನು ಕಳೆದುಕೊಂಡಿದೆ– ಬಸವರಾಜ ಬೊಮ್ಮಾಯಿ

# ಕಾಂಗ್ರೆಸ್ 40ಸ್ಥಾನವನ್ನೂ ಗೆಲ್ಲುವುದಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರ ರೈತರ ಕಿಸಾನ್ ಸನ್ಮಾನ್, ರೈತ ವಿದ್ಯಾನಿಧಿ, ರೈತ ಶಕ್ತಿ ಯೋಜನೆ ಸ್ಥಗಿತ ಮಾಡಿದ್ದಾರೆ. ಬರ ಪರಿಸ್ಥಿತಿಯಲ್ಲಿ ಒಂದು ರೂಪಾಯಿಯನ್ನೂ ನೀಡಿಲ್ಲ. ಕಾಂಗ್ರೆಸ್ ಸರ್ಕಾರ ರಾಜ್ಯ ಆಳುವ ನೈತಿಕತೆಯನ್ನು ಕಳೆದುಕೊಂಡಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಯಳವತ್ತಿ, ಮಾಗಡಿ, ಕಡಕೋಳ, ಬನ್ನಿಕೊಪ್ಪ, ಮಾಚೇನಹಳ್ಳಿ ಗ್ರಾಮಗಳಲ್ಲಿ ರೋಡ್ ಶೋ ಮೂಲಕ ಮತಯಾಚನೆ ಮಾಡಿದರು.

ಕಾಂಗ್ರೆಸ್ ಜನರಿಗೆ ಹೋಲ್ ಸೇಲ್ ಮೋಸ ಮಾಡಲು ನಿಂತಿದೆ. ಹೆಣ್ಣುಮಕ್ಕಳಿಗೆ ಒಂದು ಲಕ್ಷ ರೂಪಾಯಿ ಕೊಡುತ್ತೇವೆ ಅಂತಾ ಗ್ಯಾರಂಟಿ ಕಾರ್ಡ್ ಕೊಡುತ್ತಿದ್ದಾರೆ. ಪ್ರಣಾಳಿಕೆ ಮಾಡಲಿ ಆದರೆ, ಗ್ಯಾರಂಟಿ ಕಾರ್ಡ್ ಕೊಟ್ಟು ಸುಳ್ಳು ಡೋಂಗಿ ಮಾಡುವುದಕ್ಕೆ ಶುರು ಮಾಡಿದ್ದಾರೆ. ಇದು ಕಾನೂನು ವಿರುದ್ಧ ಎಂದು ಗ್ಯಾರಂಟಿ ಕಾರ್ಡ್ ವಿರುದ್ಧ ಹರಿಹಾಯ್ದರು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗ್ಯಾರಂಟಿ ಕಾರ್ಡ್‌ಗಳಿಗೆ ಸಹಿ ಮಾಡಿ ಕೊಡುತ್ತಿದ್ದಾರೆ. ಅವರೇನು ಈ ದೇಶದ ಪ್ರಧಾನಿನಾ, ರಾಷ್ಟ್ರಪತಿನಾ, ಅವರು ಕೊಡುವ ಗ್ಯಾರಂಟಿಗೆ ಯಾವುದೇ ಮರ್ಯಾದೆ ಇಲ್ಲ.

> ನಾನು ಈ ಕ್ಷೇತ್ರದ ಸಂಸದನಾಗಿ ಆಯ್ಕೆಯಾಗಿ ನನ್ನ ಮೂವತ್ತೈದು ವರ್ಷದ ರಾಜಕೀಯ ಅನುಭವವನ್ನು ಈ ಕ್ಷೇತ್ರದ ಅಭಿವೃದ್ಧಿಗೆ ಮೀಸಲಿಡುತ್ತೇನೆ. ಈ ಭಾಗ–ಕ್ಕೆ ಅನುಕೂಲವಾಗುವ ನೀರಾವರಿ ಯೋಜನೆ, ಕೈಗಾರಿಕೆಗಳನ್ನು ತರುವ ಪ್ರಯತ್ನ ಮಾಡುತ್ತೇನೆ. ಕ್ಷೇತ್ರದ ಜನರ ಧ್ವನಿಯಾಗಿ ಸಂಸತ್ತಿನಲ್ಲಿ ಸಿಂಹ ಘರ್ಜನೆ ಮಾಡುತ್ತೇನೆ.
>
> – ಬಸವರಾಜ್ ಬೊಮ್ಮಾಯಿ, ಬಿಜೆಪಿ ಅಭ್ಯರ್ಥಿ, ಹಾವೇರಿ ಲೋಕಸಭಾ ಕ್ಷೇತ್ರ

ಅವರು ಕೊಡುವ ಗ್ಯಾರಂಟಿ ಕಾರ್ಡ್‌ಗಳನ್ನು ಹರಿದು ಹಾಕಿ ಎಂದು ಹೇಳಿದರು.

ಲೋಕಸಭೆಯಲ್ಲಿ 543 ಸ್ಥಾನಗಳಿದ್ದು, ಬಹುಮತಕ್ಕೆ 272 ಸ್ಥಾನಬೇಕು. ಕಾಂಗ್ರೆಸ್ ಸ್ಪರ್ಧೆ ಮಾಡಿರುವುದೇ 230 ಸ್ಥಾನಗಳಿಗೆ. ಹೀಗಾಗಿ ಕಾಂಗ್ರೆಸ್ ಪಕ್ಷಕ್ಕೆ ಬಹುಮತ ಬರುವುದಿಲ್ಲ. ಕಾಂಗ್ರೆಸ್‌ಗೆ 40 ಕ್ಕಿಂತ ಹೆಚ್ಚು ಸ್ಥಾನ ಸಿಗುವುದಿಲ್ಲ. ರೈತರಿಗೆ, ಬಡವರಿಗೆ, ದಲಿತರಿಗೆ ಅನ್ಯಾಯ ಮಾಡಿರುವ ಕಾಂಗ್ರೆಸ್ ರಾಜ್ಯವನ್ನು ಆಳುವ ನೈತಿಕತೆ ಕಳೆದುಕೊಂಡಿದೆ ಎಂದು ವಾಗ್ದಾಳಿ ನಡೆಸಿದರು.

ಚುನಾವಣಾ ಪ್ರಚಾರದಲ್ಲಿ ಶಿರಹಟ್ಟಿ ಶಾಸಕ ಚಂದ್ರು ಲಮಾಣಿ ಸೇರಿದಂತೆ ಸ್ಥಳೀಯ ನಾಯಕರ ಹಾಜರಿದ್ದರು.

### ಋಣ ತೀರಿಸುವ ಸಮಯ

ನಾನು ಹಲವಾರು ಪ್ರಧಾನ ಮಂತ್ರಿಗಳನ್ನು ನೋಡಿದ್ದೇನೆ. ನರೇಂದ್ರ ಮೋದಿಯವರು ದಿನಕ್ಕೆ 18 ಗಂಟೆ ಕೆಲಸ ಮಾಡುತ್ತಾರೆ. ಅವರು ಸಾಮಾನ್ಯ ಬಡ ಕುಟುಂಬದಿಂದ ಬಂದವರು. ಅವರಿಗೆ ಬಡತನ ಅಂದರೆ ಏನು ಅಂತ ಗೊತ್ತಿದೆ. ಅವರು ದೇಶದ 25 ಕೋಟಿ ಜನರನ್ನು ಬಡತನದಿಂದ ಮೇಲೆ ತಂದಿದ್ದಾರೆ. ಮೋದಿಯವರು ಅಸಾಧ್ಯ ಎನ್ನುವುದನ್ನು ಸಾಧ್ಯ ಮಾಡಿದವರು ನರೇಂದ್ರ ಮೋದಿಯವರು, ಅವರು ಭಯೋತ್ಪಾದನೆಯನ್ನು ಸಂಪೂರ್ಣ ನಿರ್ನಾಮ ಮಾಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರು ಕೋವಿಡ್ ಸಂದರ್ಭದಲ್ಲಿ ದೇಶದ 130 ಕೋಟಿ ಜನರಿಗೆ ಉಚಿತ ಲಸಿಕೆ ಕೊಟ್ಟು ಪ್ರಾಣ ಉಳಿಸಿದ್ದಾರೆ. ಅಮೇರಿಕಾ ದೇಶದಲ್ಲಿ ಒಂದು ಲಸಿಕೆಗೆ 30 ಸಾವಿರ ರೂಪಾಯಿ ಇದೆ. ಮೋದಿಯವರು ಎಲ್ಲರಿಗೂ ಉಚಿತವಾಗಿ ಮೂರು ಬಾರಿ ಲಸಿಕೆ ಕೊಟ್ಟಿದ್ದಾರೆ. ಪ್ರಾಣ ಉಳಿಸಿದ ಅವರ ಋಣವನ್ನು ಬಿಜೆಪಿಗೆ ಮತ ಹಾಕುವ ಮೂಲಕ ತೀರಿಸಬೇಕು ಎಂದರು.

# ಕಾಂಗ್ರೆಸ್ ಸರ್ಕಾರದಿಂದ ವಿನೂತನ ಯೋಜನೆಗಳು



■ವಿಜಯಸಾಕ್ಷಿ ಸುದ್ದಿ, ಹಾವೇರಿ

ಸ್ವಾತಂತ್ರ್ಯಾನಂತರ ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಶ್ರಮಿಸಿರುವ ಕಾಂಗ್ರೆಸ್ ಪಕ್ಷ ಆರೂವರೆ ದಶಕಗಳ ಕಾಲ ಸದಾ ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಹೇಳಿದರು.

ಇಲ್ಲಿನ ಚಿಕ್ಕೇರೂರ ಗ್ರಾಮದಲ್ಲಿ ಜರುಗಿದ ಲೋಕಸಭಾ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಜನಸಾಮಾನ್ಯರ ಬಗೆಗಿನ ಕಾಳಜಿ, ಮಹಿಳೆಯರ ಮೇಲಿನ ಗೌರವ ಮತ್ತು ದೇಶದ ಸದೃಢತೆಗೆ ವಿನೂತನ ಯೋಜನೆ ರೂಪಿಸಿದ ಹೆಗ್ಗಳಿಕೆ ಕಾಂಗ್ರೆಸ್ ಪಕ್ಷದ್ದು. ತಮ್ಮ ಮಧ್ಯೆ ಇದ್ದು ಸೇವೆ ಮಾಡುವ ಸಂಕಲ್ಪ ನನ್ನದು. ಈ ಹಿನ್ನೆಲೆಯಲ್ಲಿ ತಾವೆಲ್ಲರೂ ನನಗೆ ಆಶೀರ್ವದಿಸಬೇಕೆಂದು ಮನವಿ ಮಾಡಿದರು.

ಶಾಸಕ ಯು.ಬಿ. ಬಣಕಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ ಮಡಿವಾಳರ ಮಾತನಾಡಿದರು. ಶಾಸಕ ಶ್ರೀನಿವಾಸ ಮಾನೆ, ನಿಂಗಪ್ಪ ಚಳಗೇರಿ, ಹನುಮಗೌಡ್ರ ಹುಡೇದ, ಜ್ಯೋತಿಬಾ ಜಾಧವ, ವಿಟಪ್ಪ ಬಣಕಾರ, ರಾಘು ಕಲಾಲ, ಪಿ.ಡಿ. ದೊಡ್ಡಮನಿ, ಭರಮಪ್ಪ ಡಮ್ಮಳ್ಳಿ, ಹುಸೇನ್ ಬ್ಯಾಡಗಿ, ಮಲ್ಲೇಶಪ್ಪ ಹರಿಜನ, ಜಾವೇದ್ ಹಿತ್ತಲಮನಿ, ಕರಬಸಪ್ಪ ಬಣಕಾರ, ಬಸೀರಸಾಬ ಪಟ್ಟಣಶೆಟ್ಟಿ, ರಾಜಶೇಖರ ಚೌಟಿ, ಬಸವರಾಜ ಮಂಗಣಿ, ಸಿದ್ದಪ್ಪಣ್ಣ, ದುರ್ಗಪ್ಪ ನೀರಲಗಿ, ಮಲ್ಲೇಶಣ್ಣ ಮಡ್ಲೀರ, ಮಂಜಣ್ಣ ಕಾರಗಿ, ರಾಜು ಚೌಟಗಿ, ಹನುಮಗೌಡ್ರ ಹುಡೇದ, ಬಶೀರಸಾಬ ಪಟ್ಟಣಶೆಟ್ಟಿ, ಸುನೀಲ್, ಕರಬಸಣ್ಣ ಬಣಕಾರ, ಜಮೀರುಲ್ಲಾಖಾನ್, ಖಾಜಾಸಾಬ ಬಳ್ಳಾರಿ, ಜಾವೇದ್, ಭರಮಪ್ಪ ಡಂಬಳ, ಪರಮೇಶಪ್ಪ ದೊಡ್ಡಮನಿ, ನಬಿ ಕಲಾಲ, ಸುಲೇಮಾನ್ ಬಳಿಗಾರ, ಬಸಣ್ಣ ಕೋರಿಶೆಟ್ಟರ್ ಉಪಸ್ಥಿತರಿದ್ದರು.

# ಖಬರಸ್ಥಾನದಲ್ಲಿ ನೀರಿನ ವ್ಯವಸ್ಥೆ



■ವಿಜಯಸಾಕ್ಷಿ ಸುದ್ದಿ, ಗದಗ

ಶಹರದ ಹೊಸ ಖಬರಸ್ಥಾನದಲ್ಲಿ ಶ್ರೀಮತಿ ಶಹಜಾದ ಕಟ್ಟಿಮನಿ ಅವರು ತಮ್ಮ ತಾಯಿ ರಾಜಮಾ ಕಟ್ಟಿಮನಿ ಅವರ ಸ್ಮರಣಾರ್ಥ ಬೋರ್‌ವೆಲ್ ಹಾಕಿಸಿ ಪಂಪ್‌ಸೆಟ್ ಅಳವಡಿಸಿ, ನೀರಿನ ವ್ಯವಸ್ಥೆ ಮಾಡಿಸಿಕೊಟ್ಟಿದ್ದಾಕ್ಕಾಗಿ ಅವರಿಗೆ ಜಾಕೀರ ಹುಸೇನ್ ಕಾಲೋನಿ ಮುಸ್ಲಿಂ ಜಮಾತ ಹಾಗೂ ಸಾರ್ವಜನಿಕರು ಹರ್ಷ ವ್ಯಕಪಡಿಸಿ ಧನ್ಯವಾದಗಳು ತಿಳಿಸಿದರು.

ಈ ಸಂಭರ್ಭದಲ್ಲಿ ಉಮರ್ ಫಾರೂಕ್ ಹುಬ್ಬಳ್ಳಿ, ಅಬ್ದುಲ್ ವಹಾಬ ದಂಡಿನ್, ಇಸ್ಮಾಯಿಲ್ ರೋಣ, ಮೊಹಮ್ಮದ್ ಅಲಿ ಅಕ್ಕಿ, ಮೊಹಮ್ಮದ್ ಹನೀಫ್ ಮುಲ್ಲಾ, ಲಿಯಾಕತ್ ಲಕ್ಷ್ಮೇಶ್ವರ, ಮಹಬೂಬ್ ಸದರಬಾಯಿ, ತಾಜುದ್ದೀನ್ ಪಾಪಣ್ಣವರ, ವಾಸಿಂ ಕುನ್ನಿಬಾವಿ ಮುಂತಾದವರು ಉಪಸ್ಥಿತರಿದ್ದರು.

# ಪ್ರತಿಯೊಂದು ಮತವೂ ಅತ್ಯಮೂಲ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಅಡವಿಸೋಮಾಪುರ ಗ್ರಾಮದಲ್ಲಿ ಕಳೆದ ಚುನಾವಣೆಗಳಲ್ಲಿ ಕಡಿಮೆ ಮತದಾನವಾದ ಕೇಂದ್ರಗಳಲ್ಲಿ ತಾಲೂಕು ಸ್ವೀಪ್ ಸಮಿತಿ ವತಿಯಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಳೆದ ಚುನಾವಣೆಗಿಂತ ಈ ಸಲ ಹೆಚ್ಚಿನ ಮತದಾನ ಆಗಬೇಕು. ಆದ್ದರಿಂದ ಗ್ರಾಮದ ಜನರಲ್ಲಿ ಜಾಗೃತಿ ಮೂಡಿಸುವುದು ತುಂಬಾ ಅವಶ್ಯಕ ಎಂದು ತಾಲೂಕು ಸ್ವೀಪ್ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ ಹೇಳಿದರು.

ಸಹಾಯಕ ನಿರ್ದೇಶಕ ಕುಮಾರ ಪೂಜಾರ ಮಾತನಾಡಿ, ಭಾರತದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಇದೆ. ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೆ ಧೈರ್ಯದಿಂದ ನಿಮ್ಮ ಮತದಾನದ ಹಕ್ಕು ಚಲಾಯಿಸಬೇಕು. ಹೆಚ್ಚೆಚ್ಚು ಮತದಾನ ಆಗುವಂತೆ ಪ್ರತಿಯೊಬ್ಬರಲ್ಲೂ ಜಾಗೃತಿ ಮೂಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಹಾಜರಿದ್ದರು ಸರ್ವ ಸಿಬ್ಬಂದಿಗಳು ಮಾನವ ಸರಪಳಿ ನಿರ್ಮಿಸಿ ಗ್ರಾಮದ ಜನರಲ್ಲಿ ಮತದಾನ ಜಾಗೃತಿ ಮೂಡಿಸಿದರು. ಈ ವೇಳೆ ಪಂಚಾಯತ ಅಭಿವೃದ್ಧಿ ಅಧಿಕಾರಿ, ಪಂಚಾಯತ ಸಿಬ್ಬಂದಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಆಶಾ ಕಾರ್ಯಕರ್ತರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ಹಾಜರಿದ್ದರು.

# ಆಧುನಿಕ ಯುಗದಲ್ಲಿ ಕಂಪ್ಯೂಟರ್ ಸಾಕ್ಷರತೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಪ್ರತಿಯೊಂದು ಕ್ಷೇತ್ರದಲ್ಲಿ ಕಂಪ್ಯೂಟರ್ ಬಳಕೆ ಹೆಚ್ಚಿರುವ ಕಾರಣ ವಿದ್ಯಾರ್ಥಿನಿಯರು ಕಂಪ್ಯೂಟರ್ ಜ್ಞಾನ ಪಡೆದುಕೊಳ್ಳುವುದು ಅವಶ್ಯಕವಾಗಿದೆ ಎಂದು ಕವಿವಿ ಎಂಬಿಎ ವಿಭಾಗದ ಮುಖ್ಯಸ್ಥ ಡಾ. ಎನ್. ರಾಮಾಂಜನೇಯುಲು ಹೇಳಿದರು.

ಕರ್ನಾಟಕ ವಿಶ್ವವಿದ್ಯಾಲಯ ಉನ್ನತ ಭಾರತ ಅಭಿಯಾನ ಕೋಶ, ಮತ್ತು ವಿಕಸಿತ್ ಭಾರತ @2047 ಕೋಶ, ಸ್ನಾತಕೋತ್ತರ ಕಂಪ್ಯೂಟರ್ ಸೈನ್ಸ್ ವಿಭಾಗ, ಪಬ್ಲಿಕ್ ಸ್ಕೂಲ್ ಮತ್ತು ಬೆಂಗಳೂರಿನ ಅವಸರ್ ಫೌಂಡೇಶನ್ ಟ್ರಸ್ಟ್ ಸಹಯೋಗದಲ್ಲಿ ಕವಿವಿ ದತ್ತು ಗ್ರಾಮಗಳಾದ ಕುರುವಿನಕೊಪ್ಪ ಧುಮ್ಮವಾಡ, ಗಂಬ್ಯಾಪುರ, ಜೋಡಳ್ಳಿ ಗ್ರಾಮಗಳ ಪ್ರತಿಭಾನ್ವಿತ ವಿದ್ಯಾರ್ಥಿನಿಯರಿಗೆ ಏರ್ಪಡಿಸಲಾಗಿರುವ 15 ದಿನಗಳ ಕಂಪ್ಯೂಟರ್ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ. ಈಶ್ವರ್ ಬೈದಾರಿ ಮಾತನಾಡಿ, ಪ್ರಸ್ತುತ ಸಂದರ್ಭದಲ್ಲಿ ಗಣಕಯಂತ್ರ ತರಬೇತಿ ಎಲ್ಲರಿಗೂ ಅಗತ್ಯ. ಹೊಸ ತಂತ್ರಾಂಶ, ಅವುಗಳನ್ನು ಬಳಸುವ ರೀತಿ ಕಲಿಯುವ ಮೂಲಕ ವಿದ್ಯಾರ್ಥಿನಿಯರು ಶೈಕ್ಷಣಿಕ ಪ್ರಗತಿ ಸಾಧಿಸಿ ಎಂದು ಕಿವಿಮಾತು ಹೇಳಿದರು.

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಡಾ. ಜೆ.ಎಂ. ಚಂದುನವರ್ ಮಾತನಾಡಿ, ವಿದ್ಯಾರ್ಥಿನಿಯರು ಗಣಕಯಂತ್ರ ತರಬೇತಿ ಸೇರದಂತೆ ಉನ್ನತ ಶಿಕ್ಷಣ ಪಡೆಯಲು ಪಣ ತೊಡಬೇಕು ಮತ್ತು ಉನ್ನತ ಹುದ್ದೆ ಪಡೆಯುವಂತಾಗಬೇಕು ಎಂದು ಹೇಳಿದರು. ಉನ್ನತ ಭಾರತ ಅಭಿಯಾನ ಕೋಶದ ಸಂಯೋಜಕ ಡಾ. ಚೇತನ ಜೆ.ಡಿ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದರು. ಎಸ್.ಬಿ. ದೇವರಮನೆ, ಗೀತಾ ತೆಳಗಾರ ಉಪಸ್ಥಿತರಿದ್ದರು.



ಲಕ್ಷ್ಮೇಶ್ವರ ಪಟ್ಟಣದ ಪುರಾತನ ಪ್ರಸಿದ್ಧ ಕೋಡಿಯಲ್ಲಮ್ಮ ದೇವಿಯ ದೇವಸ್ಥಾನದಲ್ಲಿ ದವನದ ಹುಣ್ಣಿಮೆ ದಿನ ಜಾತ್ರಾ ಮಹೋತ್ಸವ ಅಪಾರ ಭಕ್ತ ಸಮೂಹ ಪಾಲ್ಗೊಳ್ಳುವಿಕೆಯಲ್ಲಿ ಶೃದ್ಧಾ, ಭಕ್ತಿಯಿಂದ ನೆರವೇರಿತು.

### ಮತದಾನ ಜಾಗೃತಿಗಾಗಿ ಯುವ ಮತದಾರರಿಂದ ಸಹಿ ಸಂಗ್ರಹ ಅಭಿಯಾನ

# ಮತ ಚಲಾಯಿಸಿ ಸೌಲಭ್ಯ ಕೇಳಿ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಯುವ ಮತದಾರರಲ್ಲಿ ಕಡ್ಡಾಯ ಮತದಾನ ಜಾಗೃತಿ ಮೂಡಿಸಲು ತಾಲೂಕು ಸ್ವೀಪ್ ಸಮಿತಿ ವತಿಯಿಂದ ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಸಹಿ ಸಂಗ್ರಹ ಅಭಿಯಾನ ಆಯೋಜಿಸಲಾಗಿತ್ತು. ಸಹಿ ಸಂಗ್ರಹ ಅಭಿಯಾನದಲ್ಲಿ ಭಾಗಿಯಾದ ಯುವ ಮತದಾರರು ಕಡ್ಡಾಯವಾಗಿ ಮತದಾನ ಮಾಡುವ ಕುರಿತು ಸಂಕಲ್ಪ ಮಾಡಿ ಸಹಿ ಸಂಗ್ರಹ ಅಭಿಯಾನದಲ್ಲಿ ರುಜು ಹಾಕಿದರು.

ಅಭಿಯಾನದಲ್ಲಿ ನರಗುಂದ ವಿಧಾನಸಭೆ ಸಹಾಯಕ ಚುನಾವಣಾ ಅಧಿಕಾರಿ ಡಾ. ಹಂಪಣ್ಣ ಸಜ್ಜನ ಮಾತನಾಡಿ, ಸಂವಿಧಾನ ನೀಡಿರುವ ಮತದಾನ ಹಕ್ಕನ್ನು ಚಲಾಯಿಸದೆ ಜನಪ್ರತಿನಿಧಿಗಳನ್ನು ಸೌಲಭ್ಯ ಒದಗಿಸಿ ಎಂದು ಕೇಳುವುದಕ್ಕಿಂತ, ಮತ ಚಲಾಯಿಸಿ ಸೌಲಭ್ಯ ಕೇಳುವುದು ಉತ್ತಮ ಮತದಾರನ ನಡೆಯಾಗಿದೆ. ಸಮಾಜದಲ್ಲಿ ವಿವಿಧ ಸೌಲಭ್ಯಗಳಿಗಾಗಿ ಜನಪ್ರತಿನಿಧಿಗಳನ್ನು ಪ್ರಶ್ನಿಸುವ ಮತದಾರರ ಸಂಖ್ಯೆ ದೊಡ್ಡದಿದೆ. ಹಲವು ಮತದಾರರು ಮತದಾನದ ದಿನ ಮತ ಚಲಾಯಿಸದೇ ಚುನಾವಣೆ ಬಳಿಕ ಜನಪ್ರತಿನಿಧಿಗಳನ್ನು ಪ್ರಶ್ನಿಸುವ ಸಂಪ್ರದಾಯ ಹೊಂದಿರುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.



ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್ ಬಿರಾದಾರ ಮಾತನಾಡಿ, ಸಮಾಜದ ಎಲ್ಲ ಕ್ಷೇತ್ರಗಳಲ್ಲೂ ಸ್ವೀಪ್ ಸಮಿತಿ ವತಿಯಿಂದ ಕಡ್ಡಾಯ ಮತದಾನ ಜಾಗೃತಿ ಮೂಡಿಸಲಾಗುತ್ತಿದೆ. ಯುವ ಮತದಾರರಲ್ಲಿ ಮತದಾನ ಜಾಗೃತಿ ಮೂಡಿಸಲು ಸಹಿ ಸಂಗ್ರಹ ಅಭಿಯಾನದಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜವಾಬ್ದಾರಿಯನ್ನು ಹೆಚ್ಚಿಸುವ ಕೆಲಸ ಮಾಡುತ್ತದೆ. ಮೊದಲ ಬಾರಿಗೆ ಮತದಾನ ಮಾಡುತ್ತಿರುವ ವಿದ್ಯಾರ್ಥಿಗಳು ಯಾವುದೇ ಆಮಿಷಕ್ಕೆ ಒಳಗಾಗದೇ ದೇಶಕ್ಕೆ ಕೀರ್ತಿ ತರುವ ಸಂಸದರನ್ನು ಆಯ್ಕೆಗೊಳಿಸಲು ಮುಂದಾಗಿ ಎಂದರು.

ಅಭಿಯಾನದಲ್ಲಿ ಭಾಗವಹಿಸಿದ್ದ 250ಕ್ಕೂ ಅಧಿಕ ಯುವ ಮತದಾರರಿಗೆ ಕಾಲೇಜಿನ ಎನ್‌ಎಸ್‌ಎಸ್ ಸಂಯೋಜಕ ಬಸವರಾಜ ಹೊಸಕೋಟಿ ಕಡ್ಡಾಯ ಮತದಾನದ ಪ್ರತಿಜ್ಞಾವಿಧಿ ಬೋಧಿಸಿದರು.

ಯುವ ಮತದಾರರ ಸಹಿ ಸಂಗ್ರಹ ಅಭಿಯಾನದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಸಿದ್ದನಗೌಡ ಪಾಟೀಲ್, ಇಂಜಿನಿಯರಿಂಗ್ ವಿದ್ಯಾರ್ಥಿಗಳು ಹಾಗೂ ತಾಲೂಕು ಪಂಚಾಯತ ಸಿಬ್ಬಂದಿ ವರ್ಗದವರು ಹಾಜರಿದ್ದರು. ತಾ.ಪಂ ಸಿಬ್ಬಂದಿ ಪ್ರದೀಪ್ ಕದಮ್ ನಿರೂಪಿಸಿ ವಂದಿಸಿದರು.

> ನರಗುಂದ ತಹಸೀಲ್ದಾರ ಶ್ರೀಶೈಲ ತಳವಾರ ಮಾತನಾಡಿ, ಆಧುನಿಕ ತಂತ್ರಜ್ಞಾನ ಯುಗದಲ್ಲಿರುವ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಮತದಾನ ಪ್ರಕ್ರಿಯೆ ಬಗ್ಗೆ ತಿಳಿದುಕೊಂಡಿರಬೇಕು. ಮತ ಯಂತ್ರಗಳ ಕಾರ್ಯಕ್ಷಮತೆ, ಗೌಪ್ಯತೆ ಹಾಗೂ ಚುನಾವಣೆ ನಡೆಯುವ ಪ್ರತಿ ಹಂತಗಳನ್ನು ತಿಳಿದಿರಬೇಕು. ಜೊತೆಗೆ ಕೇವಲ ಮಾಹಿತಿಯನ್ನು ತಿಳಿದುಕೊಳ್ಳದೇ ಸುತ್ತಮುತ್ತಲಿನ ಜನರಿಗೂ ಪಾರದರ್ಶಕ ಚುನಾವಣೆ ಪ್ರಕ್ರಿಯೆ ಬಗ್ಗೆ ವಿದ್ಯಾರ್ಥಿಗಳು ತಿಳಿಸುವ ಕಾರ್ಯ ಮಾಡಬೇಕು ಎಂದರು.

## ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಪ್ರಕಟವಾದ ಪದವಿಪೂರ್ವ ದ್ವಿತೀಯ ವಾರ್ಷಿಕ ಪರೀಕ್ಷೆಯಲ್ಲಿ ಇಲ್ಲಿನ ಸನ್ಮಾರ್ಗ ಮಹಾವಿದ್ಯಾಲಯದ ವಿಜ್ಞಾನ ವಿಭಾಗದಲ್ಲಿ ಅಮೋಘ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳ ಮನೆಮನೆಗೆ ತೆರಳಿ, ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದ ಆಡಳಿತ ಮಂಡಳಿ ಹಾಗೂ ಉಪನ್ಯಾಸಕರು ಹೃತ್ಪೂರ್ವಕವಾಗಿ ಸನ್ಮಾನಿಸಿದರು.

ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದ ವಿಜ್ಞಾನ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದ ಅಕ್ಷತಾ ಅಂಗಡಿ, ದ್ವಿತೀಯ ಸ್ಥಾನ ಪಡೆದ ಲಕ್ಷ್ಮೀನರಸಿಂಹ ಹಲಗಿ ಹಾಗೂ ತೃತೀಯ ಸ್ಥಾನ ಪಡೆದ ಕಾರ್ತಿಕ ಮಠಪತಿ ಇವರೆಲ್ಲರ ಮನೆಗಳಿಗೆ ತೆರಳಿ ಸನ್ಮಾನಿಸಿ ಅಭಿನಂದಿಸಿದರು.

ಸನ್ಮಾರ್ಗ ಪ.ಪೂ ವಿದ್ಯಾಲಯಕ್ಕೆ ಕೀರ್ತಿ ತಂದುಕೊಟ್ಟ ಈ ಮೂವರು ವಿದ್ಯಾರ್ಥಿಗಳ ಸಾಧನೆಯನ್ನು ಮಹಾವಿದ್ಯಾಲಯದ ಚೇರಮನ್ ರಾಜೇಶ ಕುಲಕರ್ಣಿ, ನಿರ್ದೇಶಕರಾದ ಪ್ರೊ. ರೋಹಿತ ಒಡೆಯರ, ಪ್ರೊ. ರಾಹುಲ್ ಒಡೆಯರ, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತಿನ್ ಮುಲ್ಲಾ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ಉಪನ್ಯಾಸಕರು, ಸಿಬ್ಬಂದಿಗಳು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ.

## ಹನುಮಂತ ಶಕ್ತಿ, ಸಾಹಸದ ಪ್ರತೀಕ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಎಲ್ಲ ಊರುಗಳಲ್ಲಿಯೂ ಇರುವ ಹನುಮಂತ ದೇವರು ಶಕ್ತಿ, ಸಾಹಸ ಮತ್ತು ಜಾಣತನದ ಪ್ರತೀಕವಾಗಿದ್ದಾನೆ. ಬಹುಷಃ ಈ ದೇಶದಲ್ಲಿ ಹನುಮಂತನ ದೇವಸ್ಥಾನಗಳಿಲ್ಲದ ಊರುಗಳೇ ಇಲ್ಲ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಹೇಳಿದರು.

ಪಟ್ಟಣದ ಜಕ್ಕಲಿ ಕ್ರಾಸ್‌ನಲ್ಲಿರುವ ಶ್ರೀ ಹನುಮಂತ ದೇವರ ದೇವಸ್ಥಾನದಲ್ಲಿ ಹನುಮ ಜಯಂತಿ ನಿಮಿತ್ತ ಮಂಗಳವಾರ ಬೆಳಿಗ್ಗೆ ಆಚರಿಸಲಾದ ತೊಟ್ಟಿಲೋತ್ಸವದಲ್ಲಿ ಅವರು ಮಾತನಾಡಿದರು.

ದಕ್ಷಿಣದಲ್ಲಿನ ಹನುಮಂತನಿಗೂ, ಉತ್ತರದಲ್ಲಿನ ಶ್ರೀರಾಮನಿಗೂ ಅವಿನಾಭಾವ ಸಂಬಂಧವಿದೆ. ಹನುಂತನಿಲ್ಲದ ರಾಮಾಯಣವನ್ನು ಕಲ್ಪಿಸಿಕೊಳ್ಳಲೂ ಸಾಧ್ಯವಿಲ್ಲ. ಈ ದೇಶದಲ್ಲಿ ಇತಿಹಾಸ ಪ್ರಸಿದ್ಧವಾದ ಹತ್ತು ಹನುಮಾನ್ ಗುಡಿಗಳಿವೆ. ಅವುಗಳ ದರ್ಶನದಿಂದ ಪಾಪ ನಾಶವಾಗಿ ಪುಣ್ಯದ ಅಂಶ ಲಭಿಸುತ್ತದೆ ಎಂದು ಹೇಳಿದರು.

ಮುಕುಂದಭಟ್ಟ ಸೂರಭಟ್ಟನವರ ತೊಟ್ಟಿಲೋತ್ಸವದ ಪೂಜಾ ವಿಧಿಗಳನ್ನು ನೆರವೇರಿಸಿದರು. ಸುಮಂಗಲೆಯರು ಶ್ರೀ ಹನುಮಂತನನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಶೇಷಗಿರಿ ಕುಲಕರ್ಣಿ, ನಿವೃತ್ತ ಉಪನ್ಯಾಸಕ ಎಸ್.ಎಚ್. ಕುಲಕರ್ಣಿ, ಜಗನ್ನಾಥ ಸೂರಭಟ್ಟನವರ, ಅಜಿತ ಕುಲಕರ್ಣಿ, ಗುರುರಾಜ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ ಮುಂತಾದವರು ಪಾಲ್ಗೊಂಡಿದ್ದರು.

## ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿದೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದ್ದೇವರಮಠ ರೋಣ ವಿಧಾನಸಭಾ ಮತಕ್ಷೇತ್ರದ ನರೇಗಲ್ಲಿನಲ್ಲಿ ಇತ್ತೀಚೆಗೆ ರೋಡ್ ಶೋ ನಡೆಸಿ ಮತಯಾಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿಧಾನಸಭಾ ಚುನಾವಣೆಯ ಸಂಧರ್ಭದಲ್ಲಿ ಕಾಂಗ್ರೆಸ್ ಪಕ್ಷ ಕರ್ನಾಟಕದ ಜನತೆಗೆ ಐದು ಗ್ಯಾರಂಟಿಗಳನ್ನು ನೀಡಿ ಅವುಗಳನ್ನು ತಕ್ಷಣ ನೆರವೇರಿಸಿದ ಹೆಗ್ಗಳಿಕೆ ಕಾಂಗ್ರೆಸ್ ಸರ್ಕಾರಕ್ಕಿದೆ. ಈ ರಾಜ್ಯವನ್ನು ಹಸಿವು ಮುಕ್ತ ರಾಜ್ಯವನ್ನಾಗಿಸುವ ಉದ್ದೇಶ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರಕಾರದ್ದು. ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿದ್ದು, ಜನಸಾಮಾನ್ಯರ ಹಿತ ರಕ್ಷಣೆಗೆ ಬದ್ಧವಾಗಿದೆ ಎಂದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ರೋಣ ಮತಕ್ಷೇತ್ರದ ಶೇ.90 ಜನರಿಗೆ ಈಗಾಗಲೇ ಸರಕಾರದ ಗ್ಯಾರಂಟಿಗಳು ತಲುಪಿವೆ. ಕ್ಷೇತ್ರದ ಜನರ ಸಮಸ್ಯೆಗಳನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ. ಮತಕ್ಷೇತ್ರದ ಎಲ್ಲ ಕೆರೆಗಳನ್ನು ತುಂಬಿಸುವ ಯೋಜನೆಯನ್ನು ಈಗಾಗಲೇ ರೂಪಿಸಿದ್ದು, ಸರಕಾರದ ಅನುಮತಿ ದೊರಕಿದೆ. ಚುನಾವಣೆ ಮುಗಿದ ನಂತರ ಈ ಕಾರ್ಯವನ್ನು ಕೈಗೆತ್ತಿಕೊಳ್ಳುತ್ತೇವೆ ಎಂದು ಹೇಳಿದರು.



ಕಾಂಗ್ರೆಸ್ ಮುಖಂಡ ಟಿ.ಈಶ್ವರ ಅಭ್ಯರ್ಥಿಯ ಪರ ಮತ ಯಾಚಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಸಿದ್ದಣ್ಣ ಬಂಡಿ, ಡಾ. ಕೆ.ಬಿ. ಧನ್ನೂರ, ಎಸ್.ಎ. ಪಾಟೀಲ, ಎಚ್.ಎಸ್. ಸೋಂಪೂರ, ವಿ.ಬಿ. ಸೋಮನಕಟ್ಟಿಮಠ, ವಿ.ಬಿ. ಗುಡಿಸಾಗರ, ವೀರಣ್ಣ ಶೆಟ್ಟರ, ಎಂ.ಎಸ್. ಧಡೇಸೂರಮಠ, ಶರಣಪ್ಪ ಬೆಟಗೇರಿ, ಶೇಖಪ್ಪ ಜುಟ್ಲ, ನಿಂಗನಗೌಡ ಲಕ್ಕನಗೌಡ್ರ, ಶರಣಪ್ಪ ಗಂಗರಗೊಂಡ, ಮಲ್ಲಿಕಾರ್ಜುನ ಪಾಟೀಲ, ಗುರುರಾಜ ಕುಲಕರ್ಣಿ, ವಿನಾಯಕ ಗ್ರಾಮಪುರೋಹಿತ, ಕಳಕನಗೌಡ ಪೊಲೀಸ್ ಪಾಟೀಲ, ಶೇಖಪ್ಪ ಕೆಂಗಾರ, ಮೈಲಾರಪ್ಪ ಚಳ್ಳಮರದ, ಅಲ್ಲಾಭಕ್ಷಿ ನದಾಫ, ಹನಮಮಂತ ಅಬ್ಬಿಗೇರಿ, ನಿಂಗಪ್ಪ ಹೊನ್ನಾಪೂರ, ನಜೀರ ಹದ್ಲಿ, ಎ.ಆರ್. ಮಲ್ಲನಗೌಡ್ರ, ಬಸವರಾಜ ಅಬ್ಬಿಗೇರಿ, ಹನಮಂತ ದ್ವಾಸಲ, ಅಂದಪ್ಪ ಬಿಚ್ಚೂರ ಸೇರಿದಂತೆ ಕಾರ್ಯಕರ್ತರು ಇದ್ದರು.

## ಮೋದಿಯವರ ಹೇಳಿಕೆ ಹತಾಶೆಯ ಪ್ರತೀಕ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮುಸ್ಲಿಂ ಸಮುದಾಯದ ವಿರುದ್ಧ ಪ್ರಧಾನಿ ನರೇಂದ್ರ ಮೋದಿಯವರ ದ್ವೇಷ ಭಾಷಣ ಅವರ ಹತಾಶ ಮನಸ್ಥಿತಿಯನ್ನು ಬಹಿರಂಗಪಡಿಸುತ್ತಿದೆ. ಇದು ಅತ್ಯಂತ ಖಂಡನೀಯ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವೋಕೇಟ್ ತಾಹೇರ್ ಹುಸೇನ್ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಮೊದಲ ಹಂತದ ಮತದಾನದ ಬಳಿಕ ಪ್ರಧಾನಿಗಳಿಗೆ ಸೋಲಿನ ವಾಸನೆ ಬಡಿದಿರಬಹುದು. ಸುಳ್ಳು ಹೇಳಿ ಜನರಿಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದ ಪ್ರಧಾನಿಗಳ ಬಗ್ಗೆ ಜನರಿಗೆ ಅರಿವಾಗತೊಡಗಿದೆ. ಬೇರೆ ದಾರಿ ಕಾಣದೆ ಚುನಾವಣಾ ಪ್ರಚಾರ ಸಭೆಯಲ್ಲಿ ಧಾರ್ಮಿಕ ಭಾವನೆಗಳನ್ನು ಕೆರಳಿಸತೊಡಗಿದ್ದಾರೆ. ಚುನಾವಣಾ ಆಯೋಗ ಇದನ್ನು ಗಂಭೀರವಾಗಿ ಪರಿಗಣಿಸಿ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದಾರೆ.

### ನರೇಗಾ ಕಾಮಗಾರಿ ಮೂಲಕ ದೇಸಿ ಕ್ರೀಡೆಗೂ ಪ್ರೋತ್ಸಾಹ

## ಕಾರ್ಮಿಕರಿಗಾಗಿ ಕಬಡ್ಡಿ, ಖೋಖೋ ಆಟ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ತಾಲೂಕು ಪಂಚಾಯಿತಿ ವಿಭಿನ್ನ ಮತ್ತು ವಿಶಿಷ್ಟ ನಡೆ ಅನುಸರಿಸಿ, ನರೇಗಾ ಯೋಜನೆಗೆ ಸಾಂಸ್ಕೃತಿಕ, ಜನಪದ ಮೆರುಗು ನೀಡುತ್ತಿದೆ. ನರೇಗಾ ಯೋಜನೆಯಡಿ ಹೆಚ್ಚು ಮಾನವ ದಿನಗಳನ್ನು ಸೃಜಿಸಿ ಗ್ರಾಮೀಣ ಕೃಷಿ ಕೂಲಿ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಲು ಮುಂಡರಗಿ ತಾ.ಪಂ ಮುಂದಾಗಿದ್ದು, ಕೃಷಿ ಕಾರ್ಮಿಕರನ್ನು ಸೆಳೆಯಲು ಕೆಲಸ ಮುಗಿಸಿದ ನಂತರ ದೇಸಿ ಆಟಗಳನ್ನು ಆಡಿಸಲಾಗುತ್ತಿದೆ.

ಮಹಿಳಾ ಕಾರ್ಮಿಕರಿಂದ ಸೋಬಾನ ಪದ (ಜನಪದ ಹಾಡು) ಹಾಡಿಸಿ ಮನರಂಜನೆಯನ್ನೂ ನೀಡಲಾಗುತ್ತಿದೆ. ಜೊತೆಗೆ ಕಬ್ಬಡ್ಡಿ, ಖೋಖೋದಂತಹ ಕ್ರೀಡೆಗಳಿಗೆ ನರೇಗಾ ಕಾಮಗಾರಿ ಮೂಲಕ ಜನಪ್ರಿಯಗೊಳಿಸುತ್ತಿದೆ. ಅದರಲ್ಲೂ ದೇಸಿ ಕ್ರೀಡೆಗಳನ್ನು ಆಯ್ದುಕೊಂಡು ಕೂಲಿಕಾರ ಮಹಿಳೆಯರನ್ನು ಸಕ್ರಿಯಗೊಳಿಸಿರುವುದು ವಿಶೇಷವಾಗಿದೆ.

ದುಡಿಯುವ ಕೂಲಿಕಾರರಿಗೆ ಮನರಂಜನೆಯೂ ಮುಖ್ಯ. ಮಳೆಗಾಲ ಮರೀಚಿಕೆಯಾದ ಈ ದಿನಗಳಲ್ಲಿ ನರೇಗಾ ಯೋಜನೆ ಗ್ರಾಮೀಣ ಜನರಿಗೆ ದಾರಿದೀಪ. ಇದನ್ನು ಮನಗಂಡ ಮುಂಡರಗಿ ತಾ.ಪಂ ಸುಸ್ಥಿರ ನರೇಗಾ ಅಂಕೆ-ಸಂಖ್ಯೆ ಅಭಿವೃದ್ಧಿಯತ್ತ ಸಾಂಸ್ಕೃತಿಕ, ಜನಪದ ಚಟುವಟಿಕೆಗಳ ಮೂಲಕ ಗಮನ ಹರಿಸಿ ಜನರಿಗೆ ಮಾಹಿತಿ ತಲುಪಿಸುತ್ತಿರುವುದು ಮಾದರಿಯಾಗಿದೆ. ಗ್ರಾಮೀಣ ಪ್ರದೇಶದ ಪುರುಷರಿಗಿಂತ ಮಹಿಳೆಯರೇ ಈ ಆಟದಲ್ಲಿ ಹೆಚ್ಚು ತೊಡಗಿಕೊಂಡಿದ್ದಾರೆ. ಹೀಗಾಗಿ, ಮುಂಡರಗಿ ತಾಲೂಕು ಪಂಚಾಯಿತಿ ಕಳೆದ ವರ್ಷ ನರೇಗಾ ಕಾಮಗಾರಿಗಳಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣದಲ್ಲಿ ಶೇ.50ರಷ್ಟು ಯಶಸ್ಸು ಸಾಧಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

> ನರೇಗಾ ಕಾಮಗಾರಿಗಳ ಜೀವನಾಡಿ, ಭಾರತ ಹಳ್ಳಿಗಳಿಂದ ಕೂಡಿದ ದೇಶ. ಬೇಸಿಗೆ ಕಾಲದಲ್ಲಿ ಗ್ರಾಮೀಣ ಕೂಲಿ ಕಾರ್ಮಿಕರಿಗೆ ಕೆಲಸ ಸಿಕ್ಕರೆ ಆಗುವ ಅನುಕೂಲ ನೂರೆಂಟು. ಆ ದಿಶೆಯಲ್ಲಿ ಮುಂಡರಗಿ ತಾ.ಪಂ ಕಾರ್ಯನಿರತವಾಗಿದೆ.
>
> – ವಿಶ್ವನಾಥ ಹೊಸಮನಿ.
> ತಾ.ಪಂ ಇಓ, ಮುಂಡರಗಿ.

## ಸಂವಿಧಾನದ ಆಶಯಗಳನ್ನು ಮುಂದುವರೆಸಲು ಸಹಕರಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಬಾಲೇಹೊಸೂರ ಗ್ರಾಮದಲ್ಲಿ ಸೋಮವಾರ ಸಂಜೆ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮತಯಾಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಮ್ಮ ಭಾಗದ ನೈಜ ಸಮಸ್ಯೆಗಳ ಅರಿವಿದೆ. ಮೂಲ ಸೌಕರ್ಯ ಒದಗಿಸುವುದಷ್ಟೇ ಅಲ್ಲದೆ, ನಿಮ್ಮ ಭಾವನೆಗಳಿಗೆ ಸ್ಪಂದಿಸುತ್ತೇನೆ. ಸರ್ವರಲ್ಲೂ ಸಮಭಾವ ಕಾಣುವ ಕಾಂಗ್ರೆಸ್ ಪಕ್ಷ ದೇಶದ ಅಭಿವೃದ್ಧಿಗೆ ಅನನ್ಯ ಕೊಡುಗೆ ನೀಡಿದೆ. ಪ್ರಜ್ಞಾವಂತ ಮತದಾರರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಸಂವಿಧಾನದ ಆಶಯಗಳನ್ನು ಮುಂದುವರೆಸಲು ಸಹಕರಿಸಬೇಕು ಎಂದು ವಿನಂತಿಸಿದರು.

ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ಜನಸಾಮಾನ್ಯರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಪಂಚ ಗ್ಯಾರಂಟಿ ಯೋಜನೆ ಜಾರಿಗೊಳಿಸಿದೆ. ಜನಪರ ಭಾವನೆಯುಳ್ಳ ಆನಂದಸ್ವಾಮಿ ಅವರಿಗೆ ಬಾಲೇಹೊಸೂರ ಗ್ರಾಮದ ಮತದಾರರು ಅತಿ ಹೆಚ್ಚಿನ ಮತಗಳಿಂದ ಬೆಂಬಲಿಸಬೇಕು ಎಂದರು. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಟಿ. ಈಶ್ವರ, ಗುರುನಾಥ ದಾನಪ್ಪನವರ, ಧ್ರುವ ಹೊನ್ನಪ್ಪನವರ, ಭಾಗ್ಯಶ್ರೀ ಬಾಬಣ್ಣ, ಯಲ್ಲಪ್ಪ ಸೂರಣಗಿ, ಜಿ.ಆರ್. ಕೊಪ್ಪದ, ಶಿವಪ್ಪ ಕಬ್ಬೇರ, ಫಕ್ಕೀರೇಶ ಮ್ಯಾಟಣ್ಣವರ, ನೀಲಪ್ಪ ಸುರಸುರಿ, ಬಸವರಡ್ಡಿ ಹನುಮರಡ್ಡಿ, ಮಾರುತಿ ಕೊಳದ, ಬಸವರಾಜ ನೀಲಣ್ಣವರ, ಭರತರಾಜ ಗುಡಗೇರಿ ಉಪಸ್ಥಿತರಿದ್ದರು.

## ಸೆನ್ಸಾರ್‌ಗೆ ಸಿದ್ಧವಾಗುತ್ತಿದೆ 'ತಂತ್ರ'




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಲ್ವರ್ ಸ್ಕೈ ಪ್ರೊಡಕ್ಷನ್ ಸಿನಿಮಾ ಸಂಸ್ಥೆ ನಿರ್ಮಿಸುತ್ತಿರುವ ಕುತೂಹಲಭರಿತ 'ತಂತ್ರ' ಚಲನಚಿತ್ರ ಚಿತ್ರೀಕರಣ ಮುಗಿಸಿ ಇದೀಗ ತೆರೆಗೆ ಬರಲು ಸಿದ್ಧವಾಗಿದೆ.

ವಿಜಯಪುರದ ಶಶಿಕಾಂತ್ ನಾಟಿಕರ್ ಈ ಚಿತ್ರದಲ್ಲಿ ನಾಯಕ, ನಿರ್ಮಾಪಕರಾಗಿದ್ದಾರೆ. ನಾಯಕಿಯರಾಗಿ ಸೌಜನ್ಯ ಮತ್ತು ಮೇಘಾ, ಎರಡನೇ ನಾಯಕನಾಗಿ ನಟ ವಿಕ್ರಾಂತ್, ಪ್ರಮುಖ ಪಾತ್ರದಲ್ಲಿ ಸಾಮ್ರಾಟ್ ನಟಿಸುತ್ತಿದ್ದಾರೆ. ಪಾರು ದಾವಣಗೆರೆ ವಿಶೇಷವಾದ ಗೀತೆಯಲ್ಲಿ ಹೆಜ್ಜೆ ಹಾಕಿದ್ದಾರೆ. ಹಾಸ್ಯ ಪಾತ್ರದಲ್ಲಿ ಜೈ ಅಮೋಘ ದಾಸ್ ನಟಿಸಿ ಗಮನ ಸೆಳೆದಿದ್ದಾರೆ. ಅಲ್ಲದೆ ಸಂತೋಷ್ ಕೇರಿ ಎಂಬ ಜನಪ್ರಿಯ ಯೂಟ್ಯೂಬರ್ ಸಹ ಪ್ರಮುಖ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ.

ಛಾಯಾಗ್ರಹಣ-ರೋಹನ ದೇಸಾಯಿ, ವರ್ಧನ ಬಾಗಲಕೋಟೆ, ಕಥೆ-ವಿಶ್ವನಾಥ, ಶಶಿಕಾಂತ, ಸಾಮ್ರಾಟ, ಚಿತ್ರಕಥೆ, ಸಂಭಾಷಣೆ-ವಿಶ್ವನಾಥ, ಸಾಮ್ರಾಟ, ಸಂಗೀತ ನಿರ್ದೇಶನ-ರಮೇಶ್ ಕೃಷ್ಣ, ರೋಹನ್ ದೇಸಾಯಿ ಅವರದ್ದಿದೆ. ಸಂಕಲನ ಮತ್ತು ಡಿಐ ಓಂ ಸರವಣನ್, ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದೆ. ಸಹ ನಿರ್ದೇಶನ ಸಾಮ್ರಾಟ ಶ್ರೀನಿವಾಸ ಎಸ್.ಸಿ, ಅಶೋಕ ಕಂಬ್ಳಿ, ಸಹಾಯಕ ನಿರ್ದೇಶನ ವಿತೇಶ ಮಂಜುನಾಥ ರಾಜ, ಅಜಯ ಎ.ಜೆ, ದುರ್ಗೇಶ (ರಾಯದುರ್ಗ), ಭರಣಿ, ಸುಮಂತ ಕಾಮತ, ಮಂಜುನಾಥ ಬಂಕಾಪೂರ ಮಾಡಿದ್ದಾರೆ. ಗುಳೇದಗುಡ್ಡದ ವಿಶ್ವನಾಥ ಅವರ ನಿರ್ದೇಶನದ ಎರಡನೇ ಚಿತ್ರ ಇದಾಗಿದೆ.

### ನಿಧನ ವಾರ್ತೆ


**ಶ್ಯಾವಮ್ಮ ಕರಿಗೌಡ್ರ**



ಗದಗ: ತಾಲೂಕಿನ ನರಸಾಪೂರ ಗ್ರಾಮದ ನಿವಾಸಿ ಶ್ಯಾವಮ್ಮ ಬಾಳಪ್ಪ ಕರಿಗೌಡ್ರ (88) ಮಂಗಳವಾರ ನಿಧನರಾದರು. ಮೃತರು ಪುತ್ರಿ, ಮೂವರು ಪುತ್ರರು ಸೇರಿ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತಿಮ ಯಾತ್ರೆಯು ಏ. 24ರಂದು ಬೆಳಿಗ್ಗೆ 10ಕ್ಕೆ ಹೊರಡಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.




ಲಕ್ಷ್ಮೇಶ್ವರ ಪಟ್ಟಣದ ಪುರಾತನ ಪ್ರಸಿದ್ಧ ಕೋಡಿಯಲ್ಲಮ್ಮ ದೇವಿಯ ದೇವಸ್ಥಾನದಲ್ಲಿ ದವನದ ಹುಣ್ಣಿಮೆ ದಿನ ಜಾತ್ರಾ ಮಹೋತ್ಸವ ಅಪಾರ ಭಕ್ತ ಸಮೂಹ ಪಾಲ್ಗೊಳ್ಳುವಿಕೆಯಲ್ಲಿ ಶ್ರದ್ಧಾ, ಭಕ್ತಿಯಿಂದ ನೆರವೇರಿತು.



ರಾಜ್ಯದ ಗಣಿ, ಭೂ ವಿಜ್ಞಾನ ಹಾಗೂ ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಹರಪನಹಳ್ಳಿ ತೆಗ್ಗಿನ ಮಠದ ಸಂಸ್ಥಾನದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರನ್ನು ಸೋಮವಾರ ಭೇಟಿಯಾಗಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು, ಹಂಪಸಾಗರದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು, ಟಿ.ಎಂ. ಚಂದ್ರಶೇಖರಯ್ಯ ಉಪಸ್ಥಿತರಿದ್ದರು.

## ಮಳೆ-ಗಾಳಿಗೆ ಅಪಾರ ಹಾನಿ



■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣದಲ್ಲಿ ಸೋಮವಾರ ಸಂಜೆ ಸುರಿದ ಭಾರೀ ಮಳೆ ಹಾಗೂ ಗಾಳಿಗೆ ಪಟ್ಟಣದ ಹೊಳೆಆಲೂರ ರಸ್ತೆಯಲ್ಲಿರುವ ಕುಮಾರ ಸ್ವೀಟ್ ಮಾರ್ಟ್ ಇಂಡಸ್ಟ್ರೀಸ್‌ಗೆ ಭಾರೀ ಪ್ರಮಾಣದ ಹಾನಿಯಾಗಿದೆ.

ಸೋಮವಾರ ಸಂಜೆ ಏಕಾಏಕಿ ಭಾರೀ ಗಾಳಿಯೊಂದಿಗೆ ಆರಂಭಗೊಂಡ ಮಳೆ ಗಂಟೆಗಳ ಕಾಲ ಸುರಿಯಿತು. ಗಾಳಿಯೂ ಬೀಸಿದ ಪರಿಣಾಮ ಕುಮಾರ ಇಂಡಸ್ಟ್ರೀಸ್‌ನ ಮೇಲ್ಛಾವಣಿ ಕಿತ್ತು ಹೋಗಿದ್ದು, ಅಂದಾಜು 8-10 ಲಕ್ಷ ರೂ.ಗಳ ಸರಂಜಾಮುಗಳು ನೀರಲ್ಲಿ ಮುಳುಗಿ ಹಾನಿ ಸಂಭವಿಸಿದೆ. ಮಳೆಯ ಆರ್ಭಟಕ್ಕೆ ಪಟ್ಟಣದ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಚರಂಡಿಗಳ ನೀರು ರಸ್ತೆಗೆ ಹರಿದ ಪರಿಣಾಮ ಸುಮಾರ ನಾಲ್ಕು ಗಂಟೆಗಳ ಕಾಲ ಸಂಚಾರಕ್ಕೆ ತೊಂದರೆ ಉಂಟಾಯಿತು. ಮುಲ್ಲಾನ ಭಾವಿ ವೃತ್ತದಲ್ಲಿ ನೂರಾರು ವಾಹನಗಳು ಜಮಾವಣೆಗೊಂಡ ಪ್ರಯುಕ್ತ ಪ್ರಯಾಣಿಕರು ಪರದಾಡುವಂತಾಗಿದ್ದಲ್ಲದೆ ವಿದ್ಯುತ್ ನಿಲುಗಡೆಯಿಂದಲೂ ಸಾರ್ವಜನಿಕರು ಪರಿತಪಿಸುವಂತಾಯಿತು.

## ಕೋಡಿಯಲ್ಲಮ್ಮ ಜಾತ್ರಾ ಮಹೋತ್ಸವ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕೋಡಿಯಲ್ಲಮ್ಮ ದೇವಿಯ ದೇವಸ್ಥಾನದಲ್ಲಿ ಜಾತ್ರಾ ಮಹೋತ್ಸವವು ಮಂಗಳವಾರದಿಂದ ಆರಂಭವಾಗಿದ್ದು, ಎರಡು ದಿನಗಳ ಕಾಲ ಅದ್ದೂರಿಯಾಗಿ ಜರುಗಲಿದೆ. ನಂತರ ಮೂರು ದಿನಗಳ ಕಾಲ ಜಂಗಿ ನಿಕಾಲಿ ಕುಸ್ತಿಗಳು ನಡೆಯಲಿವೆ.

ಪಟ್ಟಣದ ಕಲಾವಿದ ರಮೇಶ ತೊರಗಲ್ ಅವರ ಮನೆಯಲ್ಲಿ ದೇವಿಯ ಮೂರ್ತಿಗೆ ಬಣ್ಣ ನೀಡಿ ಸಿದ್ಧಪಡಿಸಲಾಗಿದ್ದು, ಮಂಗಳವಾರ ಮುಂಜಾನೆ ಅವರ ಮನೆಯಿಂದ ಸುಮಂಗಲೆಯರು ದೇವಿಗೆ ಪೂಜೆ ಸಲ್ಲಿಸಿ, ಉಡಿ ತುಂಬುವ ಕಾರ್ಯವನ್ನು ನೆರವೇರಿಸಿದರು. ಅಲಂಕಾರಗೊಂಡ ಬಂಡಿಯಲ್ಲಿ ದೇವಿಯ ಭವ್ಯ ಮೆರವಣಿಗೆಯು ಪ್ರಾರಂಭಗೊಂಡು, ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸಂಚರಿಸಿ ಮದ್ಯಾಹ್ನದ ವೇಳೆಗೆ ದೇವಸ್ಥಾನಕ್ಕೆ ಆಗಮಿಸಿತು.

ಪಟ್ಟಣದ ಹಾಗೂ ವಿವಿಧ ಗ್ರಾಮಗಳ ಸಾವಿರಾರು ಭಕ್ತರು ಆಗಮಿಸಿ ದೇವಿಯ ದರ್ಶನ ಪಡೆದುಕೊಂಡರು.

## ನಿಷ್ಪಕ್ಷಪಾತ ತನಿಖೆಯಾಗಲಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹುಬ್ಬಳ್ಳಿಯ ಕಾಲೇಜು ಕ್ಯಾಂಪಸ್‌ನಲ್ಲಿ ಹಾಡಹಗಲೇ ನಡೆದ ವಿದ್ಯಾರ್ಥಿನಿ ನೇಹಾ ಹಿರೇಮಠಳ ಭೀಕರ ಹತ್ಯೆ ಇಡೀ ರಾಜ್ಯದ ಜನತೆ ಮತ್ತು ವಿದ್ಯಾರ್ಥಿಗಳಿಗೆ ಆಘಾತ ನೀಡಿದೆ. ಈ ಕೃತ್ಯವನ್ನು ಸಾರ್ವಜನಿಕವಾಗಿ ತೀವ್ರವಾಗಿ ಖಂಡಿಸುತ್ತೇವೆ ಎಂದು ತಾಲೂಕ ಜಂಗಮ ಕ್ಷೇಮಾಭಿವೃದ್ಧಿ ಹಾಗೂ ವಿವಿಧೋದ್ದೇಶಗಳ ಸಂಘದ ಅಧ್ಯಕ್ಷ ವೀರಭದ್ರಯ್ಯ ಹಿರೇಮಠ ಹೇಳಿದರು.

ಅವರು ಮಂಗಳವಾರ ಪಟ್ಟಣದಲ್ಲಿ ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿ ಸಮಾಜದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಮಾತನಾಡಿದರು.

ಇದರಲ್ಲಿ ಯಾವುದೇ ರಾಜಕೀಯ, ಜಾತಿಯ ಬಣ್ಣ ಬಳಿಯದೆ ನಿಷ್ಪಕ್ಷಪಾತ ತನಿಖೆ ಕೈಗೊಂಡು ಆರೋಪಿಗೆ ಕಠಿಣ ಶಿಕ್ಷೆ ಆಗುವಂತೆ ಮಾಡುವದು ಅವಶ್ಯವಾಗಿದೆ. ನೇಹಾ ಹಿರೇಮಠ ಅವರ ಕುಟುಂಬದ ದುಃಖದಲ್ಲಿ ಇಡೀ ರಾಜ್ಯದ ಜನತೆ ಇದೆ. ನಿರಂಜನ ಹಿರೇಮಠ ಅವರ ಕುಟುಂಬಕ್ಕೆ ನ್ಯಾಯ ದೊರಕುವಂತೆ ಮಾಡಬೇಕು ಎಂದು ಆಗ್ರಹಿಸುತ್ತೇವೆ ಎಂದರು.

ಈ ವೇಳೆ ಶಿವಯೋಗಿ ಗಡ್ಡದೇವರಮಠ, ರವಿ ಪುರಾಣಿಕಮಠ, ಎಂ.ಕೆ. ಕಳ್ಳಿಮಠ, ಮಹೇಶ್ವರಯ್ಯ ಹಿರೇಮಠ, ಶಿದ್ದಲಿಂಗೇಶ ಗೋಲಗೇರಿಮಠ, ಗಿರೀಶ ಕಲ್ಮಠ, ಪ್ರವೀಣ ಕುಲಕರ್ಣಿ, ಸೋಮಯ್ಯ ಕಲ್ಮಠ, ಗಂಗಾಧರ ಶಿಗ್ಲಿಮಠ, ಶಂಕ್ರಯ್ಯ ಹಿರೇಮಠ ಸೇರಿದಂತೆ ಸಂಘದ ತಾಲೂಕಿನ ಸದಸ್ಯರು, ಸಮಾಜದ ಮುಖಂಡರು ಹಾಜರಿದ್ದರು. ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿದರು.

### ಎಬಿವಿಪಿ ಕಾರ್ಯಕರ್ತರಿಂದ ರಾಜ್ಯ ಹೆದ್ದಾರಿ ತಡೆ, ಪ್ರತಿಭಟನೆ

# ನೇಹಾ ಹಂತಕನನ್ನು ಗಲ್ಲಿಗೇರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾಳನ್ನು ಹತ್ಯೆ ಮಾಡಿದ ದುಷ್ಕರ್ಮಿಯನ್ನು ಬಂಧಿಸಿ ಬಹಿರಂಗವಾಗಿ ಗಲ್ಲಿಗೇರಿಸಬೇಕು. ಮುಂದೆ ಯಾರೂ ಇಂತಹ ಅಮಾನವೀಯ, ನೀಚ ಕೃತ್ಯಕ್ಕೆ ಕೈ ಹಾಕದಂತೆ ಎಚ್ಚರಿಕೆ ನೀಡುವ ಕಾರ್ಯವಾಗಬೇಕು ಎಂದು ಎಬಿವಿಪಿ ಕಾರ್ಯಕರ್ತರು ಮಂಗಳವಾರ ಪಟ್ಟಣದಲ್ಲಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿ ರಾಜ್ಯ ಸರಕಾರಕ್ಕೆ ಒತ್ತಾಯಿಸಿದರು.

ಎಬಿವಿಪಿ ನೇತೃತ್ವದಲ್ಲಿ ಪಟ್ಟಣದ ಶಿಗ್ಲಿ ನಾಕಾ ಬಳಿ ಜಮಾಯಿಸಿದ್ದ ವಿವಿಧ ಕಾಲೇಜುಗಳ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಎಬಿವಿಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ರವಿ ನರೆಗಲ್, ರಾಜ್ಯದಲ್ಲಿ ಮತಾಂಧ ಶಕ್ತಿಗಳ ಅಟ್ಟಹಾಸ ತಾಂಡವವಾಡುತ್ತಿದ್ದರೂ ರಾಜ್ಯ ಸರಕಾರ ಕಣ್ಮುಚ್ಚಿ ಕುಳಿತಿದೆ. ಹಾಡಹಗಲೇ ವಿದ್ಯಾರ್ಥಿನಿ ನೇಹಾ ಹಿರೇಮಠಳನ್ನು ಬರ್ಬರವಾಗಿ ಹತ್ಯೆ ಮಾಡಿರುವ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸುವವರೆಗೂ ವಿದ್ಯಾರ್ಥಿಗಳ ಹೋರಾಟ ನಿಲ್ಲುವದಿಲ್ಲ. ಈ ಕೊಲೆಯ ತನಿಖೆಗೆ ಮೊದಲೇ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಗೃಹ ಮಂತ್ರಿಗಳು ಇದು ವೈಯಕ್ತಿಕ ಕಾರಣಕ್ಕೆ ನಡೆದ ಘಟನೆ ಎನ್ನುವ ಹೇಳಿಕೆ ನೀಡಿರುವದನ್ನು ಎಬಿವಿಪಿ ಖಂಡಿಸುತ್ತದೆ.

ಶಿಗ್ಲಿ ನಾಕಾ ಬಳಿ ಜಮಾಯಿಸಿದ್ದ ಎಬಿವಿಪಿ ಕಾರ್ಯಕರ್ತರು ಫಯಾಜ್ ಭಾವಚಿತ್ರಕ್ಕೆ ಹಾಗೂ ಟೈರ್‌ಗಳಿಗೆ ಬೆಂಕಿ ಹಚ್ಚಿ ಅಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕಾರ್ಯಕರ್ತರು ಮತ್ತು ಪೊಲೀಸರ ನಡುವೆ ವಾಗ್ವಾದ, ಮಾತಿನ ಚಕಮಕಿ ನಡೆಯಿತು. ಟೈರ್‌ಗೆ ಬೆಂಕಿ ಹಚ್ಚುವದನ್ನು ಮತ್ತು ರಸ್ತೆ ತಡೆ ಮಾಡಿ ಪ್ರತಿಭಟನೆಗಿಳಿಯದಂತೆ ತಡೆಯುತ್ತಿರುವದಕ್ಕೆ ವಿದ್ಯಾರ್ಥಿಗಳು ಅಕ್ರೋಶ ವ್ಯಕ್ತಪಡಿಸಿ ಪೊಲೀಸರು ಮತ್ತು ಸರಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ನಂತರ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿದರು.

ಎಬಿವಿಪಿ ತಾಲೂಕಾ ಸಂಚಾಲಕ ಚಂದ್ರು ಕುಂದಗೋಳ, ಮಹಾಂತೇಶ ಮಣಕವಾಡ, ಅರುಣ ಕಳ್ಳಿಹಾಳ, ಸಾಗರ ಮೆಹರವಾಡೆ, ರಾಜಶೇಖರ ಅಕ್ಕೂರ, ಗಂಗಾಧರ ಸವಣೂರ, ಸೋಮಶೇಖರ ಶಿರೋಳ, ಶಿವರಾಜ ಸಿನ್ನೂರ, ಅನಿಲ, ಅಕ್ಷಯ ಮೇಡ್ಲೇರಿ, ಸಂತೋಷ ಸಾತಪೂತೆ, ಶರಣಪ್ಪ ಶಿವನಗೌಡ ಹಾಗೂ ನೂರಾರು ವಿದ್ಯಾರ್ಥಿಗಳು ಹಾಜರಿದ್ದರು. ಪಿಎಸ್‌ಐ ಅವರ ನೇತೃತ್ವದಲ್ಲಿ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಪ್ರತಿಭಟನೆಯಿಂದ 1 ಗಂಟೆ ಕಾಲ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಹೆಣ್ಣು ಮಕ್ಕಳ ರಕ್ಷಣೆ ಮಾಡಬೇಕಾದ ಸರಕಾರವೇ ಈ ರೀತಿ ಬೇಜವಾಬ್ದಾರಿ ಹೇಳಿಕೆ ನೀಡುತ್ತಿರುವದು ಎಷ್ಟು ಸರಿ ಎಂದು ಪ್ರತಿಭಟನಾಕಾರರು ಪ್ರಶ್ನಿಸಿದರಲ್ಲದೆ, ಅವರ ಕುಟುಂಬಕ್ಕೆ ಆದ ನೋವು ಮತ್ತಾವುದೇ ಕುಟುಂಬದವರಿಗೆ ಆಗುವದು ಬೇಡ. ಮತಾಂಧರಿಂದ ಮಹಿಳೆಯರನ್ನು ರಕ್ಷಿಸುವ ನಿಟ್ಟಿನಲ್ಲಿ ಸರಕಾರ ಮುಂದಾಗಬೇಕು. ಫಯಾಜ್‌ನನ್ನು ಗಲ್ಲಿಗೇರಿಸುವವರೆಗೂ ಎಲ್ಲೆಡೆ ಹೋರಾಟ ಮುಂದುವರೆಸುತ್ತೇವೆ ಎಂದರು.



### ತಾಲೂಕಿನಾದ್ಯಂತ ಭಕ್ತಿ ಭಾವದ ಹನುಮ ಜಯಂತಿ ಆಚರಣೆ

## ಭಕ್ತಿಗೆ ಮತ್ತೊಂದು ಹೆಸರೇ ಹನಮಮಂತ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಹನುಮ ಜಯಂತಿ ಅಂಗವಾಗಿ ಮಂಗಳವಾರ ಪಟ್ಟಣ ಸೇರಿ ತಾಲೂಕಿನಾದ್ಯಂತ ಹನಮಂತದೇವರ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಅಲಂಕಾರ, ಅಭಿಷೇಕ, ತೊಟ್ಟಿಲೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾ-ಭಕ್ತಿಯಿಂದ ನೆರವೇರಿದವು.

ಪಟ್ಟಣದ ಪೇಟೆ ಆಂಜನೇಯ ದೇವಸ್ಥಾನದಲ್ಲಿ ವಿಶೇಷ ಪೂಜೆಯೊಂದಿಗೆ ಅಲಂಕರಿಸಲಾದ ಬೆಳ್ಳಿಯ ತೊಟ್ಟಿಲಲ್ಲಿ ಹನುಮಂತದೇವರ ಉತ್ಸವ ಮೂರ್ತಿಯನ್ನಿರಿಸಿ ಮಹಿಳೆಯರು, ಮಕ್ಕಳು ಸೇರಿ ತೊಟ್ಟಿಲು ಪೂಜೆ ಮಾಡಿ ಜೋಗುಳ ಪದ ಹಾಡಿದರು.

ಈ ವೇಳೆ ಮಾತನಾಡಿದ ಅರ್ಚಕ ಮುರಘೇಂದ್ರಸ್ವಾಮಿ ಹಿರೇಮಠ, ಸೇವೆ, ತ್ಯಾಗ, ನಿಷ್ಠೆ ಹಾಗೂ ಭಕ್ತಿಗೆ ಮತ್ತೊಂದು ಹೆಸರೇ ಹನಮಮಂತ ದೇವರು. ಎಲ್ಲದರಲ್ಲಿಯೂ ಮಿಗಿಲಾದ ಅದಮ್ಯ ಶಕ್ತಿ ಹೊಂದಿದ್ದರೂ ಭಕ್ತಿ, ವಿನಯಶೀಲತೆ, ಸದ್ಗುಣಗಳನ್ನು ಹನಮಂತ ಹೊಂದಿದ್ದ. ರಾಮನ ಭಕ್ತ ಹನುಮಂತ ತನ್ನ ಶ್ರದ್ಧೆ, ಭಕ್ತಿ-ನಿಷ್ಠೆಯಿಂದ ಇಂದು ಜಗತ್ತಿಗೆ ಆದರ್ಶ ಪುರುಷೋತ್ತಮನಾಗಿದ್ದಾನೆ. ಪಾಲಕರು ನಿತ್ಯ ಮಕ್ಕಳೊಂದಿಗೆ ದೇವಸ್ಥಾನಗಳಿಗೆ ಹೋಗುವುದು ಸೇರಿ ದೇವರು, ಧರ್ಮ, ಗುರು-ಹಿರಿಯರು, ತಂದೆ-ತಾಯಿಗಳನ್ನು ಗೌರವ ಭಾವನೆಯಿಂದ ಕಾಣುವ ಮನೋಧರ್ಮ ರೂಢಿಸಬೇಕು ಎಂದರು.

ಈ ವೇಳೆ ಹಿರಿಯರಾದ ಭರಮಪ್ಪ ಕೆರ್ಜಕಣ್ಣವರ, ಶಿವಜೋಗೆಪ್ಪ ಚಂದರಗಿ, ನೀಲಪ್ಪ ಕರ್ಜೆಕಣ್ಣವರ, ಈಶ್ವರಪ್ಪ ಕುಂಬಾರ, ಶಂಕರಪ್ಪ ಗೋಡಿ, ರಾಮಪ್ಪ ಕುಂಬಾರ, ಶೇಖಪ್ಪ, ಸೋಮಪ್ಪ, ಕವಿತಾ ಹತ್ತಿಕಾಳ, ಸವಿತಾ ಹಿರೇಮಠ, ಲಕ್ಷ್ಮವ್ವ ವಾರದ, ದೀಪಾ ಕುಂಬಾರ, ಮಂಗಳಾ ಕುಂಬಾರ, ಜಗದೀಶ ಸೇರಿ ಹಲವರಿದ್ದರು. ಮಾರುತಿ ಆಂಜನೇಯ ಭಜನಾ ಸಂಘದಿಂದ ಭಜನೆ ಮತ್ತು ಕೃಷ್ಣ ಕ್ಷತ್ರಿ ಮತ್ತು ಮಕ್ಕಳು ಮಂಗಳವಾದ್ಯ ನುಡಿಸಿದರು.

ಪಟ್ಟಣದ ಬಸ್ತಿಬಣ, ಹಳ್ಳದಕೇರಿ, ಹುಲಗೇರಿಬಣ, ಶಿಗ್ಲಿ ನಾಕಾದಲ್ಲಿನ ದೇವಸ್ಥಾನಗಳಲ್ಲಿ ಸೇರಿ ತಾಲೂಕಿನ ದೊಡ್ಡೂರ, ಬಾಲೆಹೊಸೂರ, ಚಿಕ್ಕಸವಣೂರ, ಸೂರಣಗಿ, ಬಟ್ಟೂರ, ಬಡ್ನಿ, ಯಲ್ಲಾಪುರ, ಶಿಗ್ಲಿ, ಅಡರಕಟ್ಟಿ, ಗೊಜನೂರ, ಯಳವತ್ತಿ, ರಾಮಗಿರಿ ಗ್ರಾಮದ ಹನಮಂತದೇವರ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು.

### ಹಿಂದೂಗಳು ಭಯದಲ್ಲಿ ಬದುಕುವಂತಾಗಿದೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠಳ ಬರ್ಬರ ಹತ್ಯೆ ಖಂಡಿಸಿ ಮಂಗಳವಾರ ಪಟ್ಟಣದ ಹಾವಳಿ ಹನುಮಂತದೇವರ ದೇವಸ್ಥಾನದ ಹತ್ತಿರ ಶ್ರೀ ರಾಮಸೇನಾ ಮತ್ತು ಹಿಂದೂಪರ ಸಂಘಟನೆಗಳು ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಶ್ರೀರಾಮ ಸೇನಾ ತಾಲೂಕ ಸಂಚಾಲಕ ಈರಣ್ಣ ಪೂಜಾರ, ರಾಜ್ಯದಲ್ಲಿ ಆಡಳಿತ ಮಾಡುತ್ತಿರುವ ಸರಕಾರ ಅಧಿಕಾರಕ್ಕೆ ಬಂದ ಮೇಲೆ ಹಿಂದೂಗಳ ಮೇಲಿನ ಹಲ್ಲೆ, ಕೊಲೆ, ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿವೆ. ಲವ್ ಜಿಹಾದ್ ಹೆಸರಿನಲ್ಲಿ ಹಿಂದೂ ಯುವತಿಯರನ್ನು ಪುಸಲಾಯಿಸಿ ಮೋಸ ಮಾಡಿ ಮೃಗೀಯ ರೀತಿಯಲ್ಲಿ ಕೊಲೆ ಮಾಡುವ ಕೆಟ್ಟ ಮನಸ್ಥಿತಿಯ ದುಷ್ಕರ್ಮಿಗಳು ಹೆಚ್ಚುತ್ತಿದ್ದು, ಹಿಂದೂ ಸಮಾಜ ಭಯದಲ್ಲಿ ಬದುಕುವಂತಾಗಿದೆ. ಸರಕಾರ ಒಂದು ಸಮಾಜವನ್ನು ಓಲೈಸುವ ನಿಟ್ಟಿನಲ್ಲಿ ಹಿಂದೂ ಸಮಾಜವನ್ನು ಕಡೆಗಣಿಸುತ್ತಿದ್ದಾರೆ ಎಂದು ಆರೋಪಿಸಿದರು. ಸರಕಾರ ನೇಹಾ ಹತ್ಯೆ ಪ್ರಕರಣದಲ್ಲಿ ಬಂಧಿತನಾಗಿರುವ ದುಷ್ಕರ್ಮಿ ಫಯಾಜ್‌ನನ್ನು ಕೂಡಲೇ ಗಲ್ಲಿಗೇರಿಸಿ ಎಂದು ಅಕ್ರೋಶ ವ್ಯಕ್ತಪಡಿಸಿದರು.

ತಹಸೀಲ್ದಾರ ವಾಸುದೇವ ಸ್ವಾಮಿ ಮನವಿ ಸ್ವೀಕರಿಸಿದರು. ಕಿರಣ ಚಿಲ್ಲೂರಮಠ, ಬಸವರಾಜ ಚಕ್ರಸಾಲಿ, ಬಸವರಾಜ ಅರಳಿ, ಮುತ್ತು, ಕರ್ಜೆಕಣ್ಣವರ, ಮಂಜುನಾಥ ಕೊಡಳ್ಳಿ, ಅರುಣ ಮೆಕ್ಕಿ, ಅಮಿತ್ ಗುಡಗೇರಿ, ಸೋಮೇಶ ಉಪನಾಳ, ಸಾಗರ ಅಳ್ಳಳ್ಳಿ, ಫಕ್ಕೀರೇಶ ಕರ್ಜೆಕಣ್ಣವರ, ನವೀನ ಕುಂಬಾರ, ಸೋಮು ಗೌರಿ, ಪ್ರಾಣೇಶ ವ್ಯಾಪಾರಿ, ವೆಂಕಟೇಶ ಕುಲಕರ್ಣಿ, ಕುಮಾರ ಕಣವಿ, ಆದೇಶ ಸವಣೂರ ಹಾಜರಿದ್ದರು.

# ಚುನಾವಣಾ ವೀಕ್ಷಕರ ಭೇಟಿ, ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ



ಲೋಕಸಭಾ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ಬಾಗಲಕೋಟೆ ಲೋಕಸಭಾ ಕ್ಷೇತ್ರದ ನರಗುಂದ ವಿಧಾನಸಭಾ ಕ್ಷೇತ್ರ ವ್ಯಾಪ್ತಿ ಸಂಬಂಧ ಚುನಾವಣಾ ಸಾಮಾನ್ಯ ವೀಕ್ಷಕರಾದ ಇ. ಶರವಣ ವೆಲ್‌ರಾಜ್ ಐಎಎಸ್, ಪೊಲೀಸ್ ವೀಕ್ಷಕರಾದ ಎಂ.ಆರ್ಶಿ ಐಪಿಎಸ್, ವೆಚ್ಚ ವೀಕ್ಷಕರಾದ ಇಫ್ತಿಕಾರ್ ಅಹಮ್ಮದ್ ಐಆರ್‌ಎಸ್ ಅವರು ಲೋಕಸಭಾ ಚುನಾವಣಾ ಸಿದ್ಧತೆ ಸಂಬಂಧಿಸಿದಂತೆ ಮಂಗಳವಾರ ಮಾಹಿತಿ ಪಡೆದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನಿಯಂತ್ರಣ ಕೊಠಡಿ ವೀಕ್ಷಿಸಿದ ನಂತರ ನಡೆದ ಸಭೆಯಲ್ಲಿ ಮಾತನಾಡಿದ ಸಾಮಾನ್ಯ ವೀಕ್ಷಕ ಶರವಣ ವೆಲ್‌ರಾಜ್, ನರುಗುಂದ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮತದಾರರ ವಿವರ, ಯುವ ಮತದಾರರ ಸಂಖ್ಯೆ, ಮತಗಟ್ಟೆಗಳ ವಿವರ, ಅಂಚೆ ಮತಪತ್ರ, ವಿದ್ಯುನ್ಮಾನ ಮತಯಂತ್ರ, ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ಸೇರಿದಂತೆ ಹಲವು ಮಾಹಿತಿ ಪಡೆದರು.

ಪೊಲೀಸ್ ವೀಕ್ಷಕರಾದ ಎಂ.ಆರ್ಶಿ, ಲೋಕಸಭಾ ಚುನಾವಣೆಯನ್ನು ನಿಷ್ಪಕ್ಷಪಾತ ಮತ್ತು ಶಾಂತಿಯುತವಾಗಿ ನಡೆಸಬೇಕು ಎಂದರಲ್ಲದೆ, ಮತಗಟ್ಟೆ ಕೇಂದ್ರಗಳಲ್ಲಿ ವಿದ್ಯುತ್, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಸೂಚಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ನರುಗುಂದ ವಿಧಾನಸಭಾ ಕ್ಷೇತ್ರದಲ್ಲಿನ ಮತದಾರರ ಸಂಖ್ಯೆ, ಯುವ ಮತದಾರರ ಸಂಖ್ಯೆ, ಮತಗಟ್ಟೆ ವಿವರ, ವಿದ್ಯುನ್ಮಾನ ಮತಯಂತ್ರ, ಭದ್ರತಾ ಕೊಠಡಿ, ಮತಗಟ್ಟೆ ಅಧಿಕಾರಿಗಳ ನಿಯೋಜನೆ, ಮೈಕ್ರೋ ವೀಕ್ಷಕರ ನೇಮಕ, ಅಂಚೆ ಮತದಾನ ಸೇರಿದಂತೆ ಲೋಕಸಭಾ ಚುನಾವಣೆ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಚೆಕ್‌ಪೋಸ್ಟ್‌ಗಳ ಸಂಖ್ಯೆ, ಪೊಲೀಸರ ನಿಯೋಜನೆ ಸೇರಿದಂತೆ ಚುನಾವಣೆ ಸಂಬಂಧ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು. ಜಿ.ಪಂ ಸಿಇಓ ಎಸ್.ಭರತ್ ಮಾತನಾಡಿ, ಜಿಲ್ಲೆಯಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಸಂಬಂಧಿಸಿದಂತೆ ವಿವಿಧ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಅಮಿನಸಾಬ್ ಅತ್ತಾರ, ನಿಯಂತ್ರಣ ಕೊಠಡಿಯ ನೋಡಲ್ ಅಧಿಕಾರಿ ಸೈಯದ್ ಸೇರಿದಂತೆ ವಿವಿಧ ವಿಭಾಗದ ನೋಡಲ್ ಅಧಿಕಾರಿಗಳು ಇದ್ದರು.

# ಕಾಂಗ್ರೆಸ್ ಕೇವಲ ಆಶ್ವಾಸನೆ ನೀಡುವದಿಲ್ಲ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಶಿಗ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠರ ಪರವಾಗಿ ದೀಪಾ ಆನಂದ ಗಡ್ಡದೇವರಮಠ ಪ್ರಚಾರ ಕೈಗೊಂಡರು.

ಶಿಗ್ಲಿ ಪಂಚಾಯಿತಿ ವ್ಯಾಪ್ತಿಯಲ್ಲಿ ಮನೆ ಮನೆಗೆ ತೆರಳಿ ಪ್ರಚಾರ ಕೈಗೊಂಡು, ಕಾಂಗ್ರೆಸ್ ನೀಡಿರುವ ಗ್ಯಾರಂಟಿ ಕಾರ್ಡಗಳನ್ನು ವಿತರಿಸಿ ಮಾತನಾಡಿ, ಕಾಂಗ್ರೆಸ್ ಕೇವಲ ಆಶ್ವಾಸನೆ ನೀಡುವದಿಲ್ಲ ಎನ್ನುವದನ್ನು ರಾಜ್ಯ ಸರಕಾರದ ಆಡಳಿತದಲ್ಲಿ ಜನರು ಅರಿತುಕೊಂಡಿದ್ದಾರೆ. ಇದೀಗ ಕೇಂದ್ರದಲ್ಲಿ ಕಾಂಗ್ರೆಸ್ ಸರಕಾರ ಅಸ್ತಿತ್ವಕ್ಕೆ ಬಂದರೆ ನೀಡಿರುವ ಗ್ಯಾರಂಟಿಗಳನ್ನು ಈಡೇರಿಸಲು ಬದ್ಧವಾಗಿದೆ ಎಂದರು.

ಪ್ರಚಾರ ಸಂಯೋಜಕ ರಾಜು ಓಲೇಕಾರ ಮಾತನಾಡಿದರು. ಯಲ್ಲಪ್ಪ ತಳವಾರ, ರಾಮಣ್ಣ ಲಮಾಣಿ, ರಾಜಣ್ಣ ಹೂಲಗೂರ, ಶಿವಣ್ಣ ಕುರಿ, ಸಿದ್ದು ಪೂಜಾರ, ಅಪ್ಪಣ್ಣ ನೂಲ್ವಿ, ಈಸಣ್ಣ ಹೂಲಗೂರ, ರಾಜು ಓಲೇಕಾರ, ಸುರೇಶ ಸ್ವಾದಿ, ರಾಮಣ್ಣ ಕಲಕೋಟಿ, ರಫೀಕ ಕಲಬುರ್ಗಿ, ರಾಜು ನದಾಫ, ನಾಗರಾಜ ಅಜ್ಜಪ್ಪಶೆಟ್ಟರ, ವಿಶ್ವಾ ದೊಡ್ಡಮನಿ, ನಾರಾಯಣ ಬೆಟಗೇರಿ, ಅನಿಲ್ ಬಿದರಳ್ಳಿ, ಕಲ್ಲನಗೌಡ್ರ, ಮಂಜು ಯಲವಿಗಿ, ಗೊಂದಕರ, ಪೂಜಾರ, ದುಂಡವ್ವ ಹಾದಿಮನಿ, ಭಾಗ್ಯಶ್ರೀ ಲಮಾಣಿ ಪಾತಿಮಾ ನಧಾಪ, ಶಭೀನಾ ನಧಾಪ, ಲಕ್ಷ್ಮೀ ಮೂರ್ಕಂಡಿ, ಗುರುಬಸಣ್ಣವರ, ರೇಣುಕಾ ಅತಡಕರ, ಲಕ್ಷ್ಮೀ ಗವಳೆರ, ಶಮಶಾದಬೀ ತಂಬಾಕದ ಸೇರಿದಂತೆ ಕಾರ್ಯಕರ್ತರು ಇದ್ದರು.



ಮುಳಗುಂದ ಪಟ್ಟಣದಲ್ಲಿ ಅಲ್ಲಮ ಪ್ರಭುಸ್ವಾಮಿ ರಥೋತ್ಸವವು ಮಂಗಳವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ಜರುಗಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka